# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ – 147 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ: 28–12–2024 ಶನಿವಾರ | ಪುಟ: 4 | ಬೆಲೆ : ರೂ.2–00
Volume - 02 Issue - 147 | RNI No: KARKAN/2023/88462 | KA/SK/CTA-874/2024-2026 | Chitradurga | Date: 28-12-2024 Saturday | Page: 4 | Price: Rs. 2-00



ಒಳಪುಟದ ಸುದ್ದಿಗಳು
ಶರಣ ಸಾಹಿತ್ಯ ಪರಿಷತ್ತಿನ ಸಮ್ಮೇಳನದ ಸರ್ವಧ್ಯಾಕ್ಷರಾಗಿ ಡಾ.ಸಿದ್ದರಾಮ ಬೆಲ್ದಾಳ ಆಯ್ಕೆ 2
ನೆಹರೂ ಸರ್ಕಲ್ ಸುತ್ತಮುತ್ತ ಅಡ್ಡಾದಿಡ್ಡಿ ವಾಹನ ನಿಲ್ಲಿಸಿದರೆ ಯದ್ವಾತದ್ವಾ ದಂಡ 3
ಅಕ್ಷರಗಳ ಸಂಶೋಧನೆ–ಬರವಣಿಗೆ–ಸಾಹಿತ್ಯ– ಕುವೆಂಪು– ಕನ್ನಡ ಭಾಷೆ.. 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### 10 ಗಂಟೆಗಳ ಹಾರ್ಟ್ ಸರ್ಜರಿ ಬಳಿಕ ವೈದ್ಯರ ಬಳಿ ಮನಮೋಹನ್ ಸಿಂಗ್ ಕೇಳಿದ್ದು ಇದೊಂದೇ ವಿಷಯ



» **ನವದೆಹಲಿ**

ಮಾಜಿ ಪ್ರಧಾನಿ, ಆರ್ಥಿಕ ಸುಧಾರಣೆಯ ಹರಿಕಾರ ಡಾ. ಮನಮೋಹನ್ ಸಿಂಗ್ ವಿಧಿವಶರಾದ ಸುದ್ದಿಗೆ ಇಡೀ ದೇಶವೇ ಕಂಬನಿ ಮಿಡಿದಿದ್ದು, ರಾಜಕೀಯ ನಾಯಕರು ಸೇರಿದಂತೆ ಗಣ್ಯರು ಸಂತಾಪ ಸೂಚಿಸಿದ್ದಾರೆ. ದೇಶ ಕಂಡ ನೆಚ್ಚಿನ ನಾಯಕರ ಬಗ್ಗೆ ಹಲವರು ಹಲವು ರೀತಿಯ ಅಭಿಪ್ರಾಯಗಳನ್ನು ಹಂಚಿಕೊಳ್ಳುತ್ತಿದ್ದು, ಕೆಲವರು ಅವರೊಂದಿಗೆ ಕಳೆದ ಅಮೂಲ್ಯ ಕ್ಷಣಗಳನ್ನು ಈ ಸಂದರ್ಭದಲ್ಲಿ ನೆನಪಿಸಿಕೊಂಡು ಭಾವುಕರಾಗಿದ್ದಾರೆ.

**2009:** 2009ರಲ್ಲಿ ದೇಶದ ಪ್ರಧಾನಿಯಾಗಿ ಅಧಿಕಾರದಲ್ಲಿದ್ದ ಮನಮೋಹನ್ ಸಿಂಗ್ ಅವರಿಗೆ ಹೃದಯ ಶಸ್ತ್ರಚಿಕಿತ್ಸೆ ಮಾಡಲಾಗಿತ್ತು. ಈ ಸಮಯದಲ್ಲಿ ಆಸ್ಪತ್ರೆಯ ಕೊಠಡಿಯಲ್ಲಿ ವೈದ್ಯರೊಂದಿಗೆ ಹೆಚ್ಚು ಸಮಯ ಕಳೆದ ಡಾ. ಸಿಂಗ್, 10 ಗಂಟೆಗಳ ಶಸ್ತ್ರಚಿಕಿತ್ಸೆ ಬಳಿಕ ವೈದ್ಯರ ಬಳಿ ಕೇಳಿದ ಆ ಒಂದೇ ಒಂದು ವಿಷಯದ ಬಗ್ಗೆ ಸರ್ಜರಿ ಮಾಡಿದ ಡಾಕ್ಟರ್ ರಮಕಾಂತ್ ಪಾಂಡಾ ಅವರು ಇಂದು ಈ ಸಂದರ್ಭದಲ್ಲಿ ನೆನಪಿಸಿಕೊಂಡಿದ್ದಾರೆ. ಅಸಲಿಗೆ ಅವರು ಕೇಳಿದ್ದು ತಮ್ಮ ಆರೋಗ್ಯದ ಬಗ್ಗೆಯೂ ಅಲ್ಲ, ಕುಟುಂಬಸ್ಥರ ಬಗ್ಗೆಯೂ ಅಲ್ಲ ಎಂಬುದೇ ಅಚ್ಚರಿ.

**ಒಂದು ನಿಮಿಷ ಆಶ್ಚರ್ಯಕ್ಕೆ ದೂಡಿತು:** 'ಅದು 2009. ಆಗ ಡಾ. ಸಿಂಗ್ ಅವರಿಗೆ ಹೃದಯ ಶಸ್ತ್ರಚಿಕಿತ್ಸೆ ಇತ್ತು. ನಾನು ಅವರಿಗೆ ಸರ್ಜರಿ ಮಾಡುವ ವೈದ್ಯನಾಗಿದ್ದೆ. ದೆಹಲಿಯ ಆಲ್ ಇಂಡಿಯಾ ಇನ್‌ಸ್ಟಿಟ್ಯೂಟ್ ಆಫ್ ಮೆಡಿಕಲ್ ಸೈನ್ಸಸ್‌ನಲ್ಲಿ (ಏಮ್ಸ್) ದಾಖಲಾಗಿದ್ದ ಅವರಿಗೆ 10ರಿಂದ 11 ಗಂಟೆಗಳ ಕಾಲ ಬೈಪಾಸ್ ಶಸ್ತ್ರಚಿಕಿತ್ಸೆಗೆ ಒಳಪಡಿಸಿದ್ದೆವು. ಸರ್ಜರಿ ಯಶಸ್ವಿ ಆದ ಬಳಿಕ ಅವರನ್ನು ವಾರ್ಡ್‌ಗೆ ಶಿಫ್ಟ್ ಮಾಡಲಾಯಿತು. ರಾತ್ರಿ ಅವರಿಗೆ ಅಳವಡಿಸಿದ್ದ ಮೊದಲ ಉಸಿರಾಟದ ಪೈಪ್ ಅನ್ನು ಹೊರತೆಗೆದಾಗ ಅವರು ಮಾತನಾಡಲು ಪ್ರಾರಂಭಿಸಿದರು. ಡಾ. ಸಿಂಗ್, ನನ್ನನ್ನು ಮೊದಲು ಕೇಳಿದ್ದೇ 'ನನ್ನ ದೇಶ ಹೇಗಿದೆ? ಕಾಶ್ಮೀರ ಹೇಗಿದೆ' ಎಂದು. ಇದು ಒಂದು ನಿಮಿಷ ನನ್ನನ್ನು ಬಹಳ ಆಶ್ಚರ್ಯಕ್ಕೆ ದೂಡಿತು' ಎಂದು ವೈದ್ಯರು ಹೇಳಿದ್ದಾರೆ.

**ಬಲವಾದ ಮನುಷ್ಯ:** 'ಈ ಮಾತುಗಳನ್ನು ಕೇಳಿದ ನಾನು, ಕೂಡಲೇ ಏಕೆ ನೀವು ನಿಮ್ಮ ಸರ್ಜರಿ ಹೇಗಾಯಿತು? ಎಂಬುದರ ಬಗ್ಗೆ ಏನ್ನನ್ನು ಕೇಳಲಿಲ್ಲ ಎಂದು ಪ್ರಶ್ನಿಸಿದಾಗ ಅವರು, 'ನನಗೆ ಶಸ್ತ್ರಚಿಕಿತ್ಸೆಯ ಬಗ್ಗೆ ಚಿಂತೆ ಇಲ್ಲ. ನನ್ನ ದೇಶದ ಬಗ್ಗೆ ನನಗೆ ಹೆಚ್ಚು ಚಿಂತೆ ಇದೆ' ಎಂದರು. ನನ್ನ ಪ್ರಕಾರ, ಅವರೊಬ್ಬರು ಮಹಾನ್ ವ್ಯಕ್ತಿ, ವಿನಮ್ರ ವ್ಯಕ್ತಿತ್ವ ಮತ್ತು ದೇಶಭಕ್ತಿ ಹೊಂದಿದ್ದವರು. ಸಾಮಾನ್ಯವಾಗಿ ಇಂತಹ ಶಸ್ತ್ರಚಿಕಿತ್ಸೆಗಳ ಬಳಿಕ ರೋಗಿಗಳು ಎದೆನೋವಿನ ಬಗ್ಗೆ ದೂರು ನೀಡುತ್ತಾರೆ. ಆದರೆ, ಅವರು ಮಾತ್ರ ಒಮ್ಮೆಯೂ ಇದರ ಬಗ್ಗೆ ಧ್ವನಿ ಎತ್ತಲಿಲ್ಲ. ಇದೇ ಹೇಳುತ್ತೆ, ಡಾ. ಸಿಂಗ್ ಒಬ್ಬ ಬಲವಾದ ಮನುಷ್ಯ ಎಂದು' ರಮಕಾಂತ್ ಅವರೊಂದಿಗಿದ್ದ ನೆನಪನ್ನು ಇಲ್ಲಿ ಮೆಲುಕು ಹಾಕಿದ್ದಾರೆ,(ಏಜೆನ್ಸೀಸ್).





# ಮನಮೋಹನ್ ಸಿಂಗ್ ಭಾರತ ಕಂಡ ಪ್ರಾಮಾಣಿಕ ಪ್ರಧಾನಿ

## ಅವರ ಬದುಕು, ಆರ್ಥಿಕ ನೀತಿಗಳು ನಮ್ಮೆಗೆಲ್ಲ ಪ್ರೇರಣೆ – ಕರ್ನಾಟಕದ ಆರ್ಥಿಕ ಸ್ಥಿತಿ ಉತ್ತಮವಾಗಿದೆ ಎಂದು ಪ್ರಶಂಸಿದ್ದನ್ನು ಸ್ಮರಿಸಿದ ಸಿಎಂ

» **ಬೆಳಗಾವಿ**

ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ಅವರ ಬದುಕು , ಆರ್ಥಿಕ ನೀತಿಗಳು ನಮ್ಮೆಗೆಲ್ಲ ಪ್ರೇರಣೆ. ಶ್ರೇಷ್ಠ ಆರ್ಥಿಕ ತಜ್ಞರಾಗಿದ್ದ ಅವರು, 2013–18 ರವರೆಗೆ ಕರ್ನಾಟಕದ ಆರ್ಥಿಕ ಸ್ಥಿತಿ ಉತ್ತಮವಾಗಿದೆ ಎಂದು ಬಣ್ಣಿಸಿದ್ದನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಮರಿಸಿದರು.

ಅವರು ಶುಕ್ರವಾರ ಬೆಳಗಾವಿಯಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದರು.

ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ಅವರು ನಿಧನಕ್ಕೆ ಸಂತಾಪ ಸೂಚಿಸಿದ ಮುಖ್ಯಮಂತ್ರಿಗಳು, ಈಗಿನ ಪಾಕಿಸ್ತಾನದ ಪಂಜಾಬ್ ಪ್ರಾಂತ್ಯದಲ್ಲಿ ಜನಿಸಿದ ಮನಮೋಹನ್ ಸಿಂಗ್ ರವರು ಜಗತ್ತಿನ ಖ್ಯಾತ ಅರ್ಥಶಾಸ್ತ್ರಜ್ಞರಾಗಿ ಬೆಳೆದವರು. ಪಿ.ವಿ. ನರಸಿಂಹರಾವ್ ಅವರ ಸಂಪುಟದಲ್ಲಿ ಆರ್ಥಿಕ ಕಾರ್ಯದರ್ಶಿಗಳಾಗಿ ಸೇವೆ ಸಲ್ಲಿಸಿದ್ದರು. ಉದಾರೀಕರಣದ ಮೂಲಕ ಭಾರತವನ್ನು ವಿಶ್ವಮಟ್ಟಕ್ಕೆ ಕೊಂಡೊಯ್ಯುವಲ್ಲಿ ಪ್ರಮುಖ ಪಾತ್ರ ವಹಿಸಿದವರು. ಅವರ ಅಪಾರ ಜ್ಞಾನ ಹಾಗೂ ದೂರದೃಷ್ಟಿಯ ಯೋಜನೆಗಳು, ಭಾರತವು ಆರ್ಥಿಕ ಮುಗ್ಗಟ್ಟಿನಿಂದ ಹೊರಬರಲು ಕಾರಣವಾಯಿತು ಎಂದರು.

**ದೇಶದ ಆರ್ಥಿಕತೆಯಲ್ಲಿ ಮನಮೋಹನ್ ಸಿಂಗ್ ರ ಹೆಜ್ಜೆಗುರುತು:** 2004 ರಲ್ಲಿ ಕಾಂಗ್ರೆಸ್ ಪಕ್ಷ ಬಹುಮತ ಸಾಧಿಸಿ, ಸೋನಿಯಾ ಗಾಂಧಿಯವರು ಪ್ರಧಾನಿಯಾಗಲು ನಿರಾಕರಿಸಿದ ಸಂದರ್ಭದಲ್ಲಿ ಮನಮೋಹನ್ ಸಿಂಗ್ ಅವರನ್ನು ಪ್ರಧಾನ ಮಂತ್ರಿಯಾಗಿ ಆಯ್ಕೆಮಾಡಲಾಗುತ್ತದೆ. ಹತ್ತು ವರ್ಷಗಳ ಕಾಲ ಪ್ರಧಾನಿ ಮಂತ್ರಿಯಾಗಿ ದೇಶದ ಅಧಿಕಾರದ ಚುಕ್ಕಾಣಿಯನ್ನು ಹಿಡಿದ ಮನಮೋಹನ್ ಸಿಂಗ್ ಅವರು ದೇಶವನ್ನು ಆರ್ಥಿಕವಾಗಿ, ಸಾಮಾಜಿಕವಾಗಿ ಅಭಿವೃದ್ಧಿಗೊಳಿಸಿದರು. ದೇಶ ಕಂಡ ಪ್ರಾಮಾಣಿಕ ಪ್ರಧಾನಮಂತ್ರಿಗಳಲ್ಲಿ ಒಬ್ಬರು. ರಾಜಕಾರಣದಲ್ಲಿ ಪ್ರಾಮಾಣಿಕತೆ ಕಾಣಸಿಗುವುದು ವಿರಳ. ಆದರೆ ತಮ್ಮ ಅಧಿಕಾರವಧಿಯಲ್ಲಿ ಪ್ರಾಮಾಣಿಕವಾಗಿ ಶ್ರಮಿಸಿ, ದೇಶದ ಆರ್ಥಿಕತೆಯಲ್ಲಿ ತಮ್ಮ ಹೆಜ್ಜೆಗುರುತನ್ನು ಬಿಟ್ಟುಹೋಗಿದ್ದಾರೆ ಎಂದರು.

**ಅವರ ನಿಧನದಿಂದ ದೇಶಕ್ಕೆ ದೊಡ್ಡ ನಷ್ಟ:** ಅವರ ಬದುಕು , ಆರ್ಥಿಕ ನೀತಿಗಳು ನಮ್ಮೆಗೆಲ್ಲ ಪ್ರೇರಣೆ ಹಾಗೂ ಸ್ಫೂರ್ತಿ ನೀಡುತ್ತಿದೆ. ದೀರ್ಘಾವಧಿಯವರೆಗೆ ಅಧಿಕಾರದಲ್ಲಿದ್ದರೂ ಅತ್ಯಂತ ಸರಳ, ವಿನಯವಂತರಾಗಿದ್ದ ಶ್ರೀಯುತರು ದೇಶದ ಗೌರವಯುತ ವ್ಯಕ್ತಿಯಾಗಿದ್ದರು. ಇಂದು ಅವರು ನಮ್ಮನ್ನು ಅಗಲಿದ್ದು, ಭಾರತಕ್ಕೆ ಆದ ದೊಡ್ಡ ನಷ್ಟ. ಅವರ ಸಾವಿನ ದು:ಖವನ್ನು ಭರಿಸುವ ಶಕ್ತಿಯನ್ನು ಕುಟುಂಬ ವರ್ಗದವರಿಗೆ, ಅಭಿಮಾನಿ ಬಳಗ ಭಗವಂತ ನೀಡಲಿ ಎಂದು ಪ್ರಾರ್ಥಿಸುವುದಾಗಿ ತಿಳಿಸಿದರು.

**ಆಹಾರ ಭದ್ರತೆ ಕಾಯ್ದೆಯಡಿ ಅನ್ನಭಾಗ್ಯ ಯೋಜನೆ:** ಮನಮೋಹನ್ ಸಿಂಗ್ ದೇಶದಲ್ಲಿ ಮೊದಲ ಬಾರಿಗೆ ಆಹಾರ ಭದ್ರತೆ ಕಾಯ್ದೆಯನ್ನು ಜಾರಿಗೆ ತಂದವರು. ದೇಶದ ಬಡತನವಿದ್ದಿದ್ದರಿಂದ, ಕಡಿಮೆ ದರದಲ್ಲಿ ಆಹಾರ ಲಭಿಸುವಂತಾಗಬೇಕೆಂಬ ಸದುದ್ದೇಶದಿಂದ ಈ ಕಾನೂನನ್ನು ಜಾರಿಗೆ ತರಲಾಯಿತು. ನಂತರ ನಾನು ಮುಖ್ಯಮಂತ್ರಿಯಾಗಿದ್ದ ಅವಧಿಯಲ್ಲಿ ಬಿಪಿಎಲ್ ಕಾರ್ಡ್ದಾರರಿಗೆ ಅನ್ನಭಾಗ್ಯ ಯೋಜನೆಯಡಿ ಒಂದು ರೂ. ದರದಲ್ಲಿ ಒಂದು ಕೆಜಿ ಅಕ್ಕಿ ನೀಡುವ ಯೋಜನೆಯನ್ನು ರಾಜ್ಯದಲ್ಲಿ ಜಾರಿಗೆ ತರಲಾಯಿತು. ನಂತರದ ದಿನಗಳಲ್ಲಿ ಐದು ಕೆಜಿ ಯಿಂದ ಏಳು ಕೆಜಿಯವರೆಗೆ ಹೆಚ್ಚಿಸಿ ಅಕ್ಕಿಯನ್ನು ಉಚಿತವಾಗಿ ನೀಡಲಾಗುತ್ತಿತ್ತು. ಇಂದು ನರೇಂದ್ರಮೋದಿಯವರು ನೀಡುತ್ತಿರುವ ಐದು ಕೆಜಿ ಆಹಾರಧಾನ್ಯ ಹಂಚಿಕೆಯ ಯೋಜನೆ ಪ್ರಾರಂಭವಾದದ್ದು ಮನಮೋಹನ್ ಸಿಂಗ್ ಅವರ ದೂರದೃಷ್ಟಿಯಿಂದ. ದೇಶದ ಬಡವರು, ನಿರುದ್ಯೋಗಿಗಳ ಕಷ್ಟನಿವಾರಣೆಗೆ ಪೂರಕ ಯೋಜನೆಗಳನ್ನು ಜಾರಿಗೊಳಿಸಿದ್ದರು ಎಂದರು.

**ಕರ್ನಾಟಕದ ಆರ್ಥಿಕ ಸ್ಥಿತಿ ಉತ್ತಮವಾಗಿದೆ ಎಂದು ಪ್ರಶಂಸೆ:** ಮನಮೋಹನ್ ಸಿಂಗ್ ರವರೊಂದಿಗಿನ ಮುಖ್ಯಮಂತ್ರಿಗಳ ಒಡನಾಟದ ಬಗ್ಗೆ ಪ್ರತಿಕ್ರಿಯೆ ನೀಡಿ, ಅವರು ಪ್ರಧಾನಿಯಾಗಿದ್ದಾಗ ಭೇಟಿ ಮಾಡಿದ್ದೂ, ನಾನು ಮುಖ್ಯಮಂತ್ರಿಯಾಗಿದ್ದ ಸಂದರ್ಭದಲ್ಲಿ ಕರ್ನಾಟಕದಲ್ಲಿ ನಡೆದ ಕಾರ್ಯಕ್ರಮವೊಂದಕ್ಕೆ ಆಗಮಿಸಿ, ರಾಜ್ಯದ ಆರ್ಥಿಕತೆಯ ಅಭಿವೃದ್ಧಿಗೆ ಸಲಹೆ ಸೂಚನೆಗಳನ್ನು ನೀಡಿದ್ದರು ಎಂದರು.




### ಮನಮೋಹನಸಿಂಗ್ ಬಡ ಜನರ ಹಿತಕ್ಕಾಗಿ ದೇಶದ ಆರ್ಥಿಕತೆ ರೂಪಿಸಿದ ತಜ್ಞರಾಗಿದ್ದರು: ಸಿದ್ದರಾಮಯ್ಯ

» **ಬೆಳಗಾವಿ**

ಮನಮೋಹನಸಿಂಗ್ ಅವರು ವಿಶ್ವಶ್ರೇಷ್ಠ ಆರ್ಥಿಕ ತಜ್ಞಾರಾಗಿ, ದೇಶದ ಮಧ್ಯಮ ಮತ್ತು ಬಡ ಜನರ ಹಿತಕ್ಕಾಗಿ ದೇಶದ ಆರ್ಥಿಕತೆಯನ್ನು ರೂಪಿಸಿದ ತಜ್ಞರಾಗಿದ್ದರು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನುಡಿದರು.

ಸಿಪಿಇಡಿ ಮೈದಾನದಲ್ಲಿ ಕೆಪಿಸಿಸಿ ವತಿಯಿಂದ ಆಯೋಜಿಸಲಾಗಿದ್ದ ಮಾಜಿ ಪ್ರಧಾನಿ ದಿ.ಮನಮೋಹನ್ ಸಿಂಗ್ ಅವರ ಸಂತಾಪ ಸಭೆಯಲ್ಲಿ ಮಾತನಾಡಿದರು. ಸಭೆಯಲ್ಲಿ ಸಿಎಂ ಮಾತುಗಳ ಹೈಲೈಟ್ಸ್...*ಮನಮೋಹನ್ ಸಿಂಗ್ ಅವರ ಬದುಕಿನ ಮಾರ್ಪಾಡು ನೋಡಿದಾಗ ಆಶ್ಚರ್ಯ ಆಗತ್ತೆ. ಅತ್ಯಂತ ಕಡುಬಡತನದ ಕುಟುಂಬದಲ್ಲಿ ಜನಿಸಿ, ದೇಶ ಕಂಡ ವಿಶ್ವಶ್ರೇಷ್ಠ ಆರ್ಥಿಕ ತಜ್ಞರಾಗಿ ಎರಡು ಬಾರಿ ದೇಶದ ಪ್ರಧಾನಿಯಾದರು.

ಇವರಿಗಿಂತ ದೊಡ್ಡ ಆರ್ಥಿಕ ತಜ್ಞರು ಇರಬಹುದು. ಆದರೆ, ಬಹಳ ಮೃದು ಸ್ವಭಾವದ, ಮಿತ ಭಾಷಿಯಾಗಿ ಮಧ್ಯಮ ಮತ್ತು ಬಡ ಜನರ ದೃಷ್ಟಿಯಿಂದ ಈ ಜನರ ಹಿತಕ್ಕಾಗಿ ದೇಶದ ಆರ್ಥಿಕತೆಯನ್ನು ರೂಪಿಸಿದವರು.

ನಾನು ಹಲವು ಬಾರಿ ಇವರನ್ನು ಭೇಟಿಯಾಗಿದ್ದೆ. ಸಂಯಮದಿಂದ ನಮ್ಮ ಮಾತನ್ನು ಕೇಳಿಸಿಕೊಂಡು ಬಳಿಕ ಪ್ರಾಮಾಣಿಕ ಅಭಿಪ್ರಾಯ ನೀಡುತ್ತಿದ್ದರು.ತಾವು ಅಲಂಕರಿಸಿದ ಎಲ್ಲಾ ಹುದ್ದೆಗಳಿಗೂ ನ್ಯಾಯ ಒದಗಿಸಿದರು. ಖಃಖ ಗವರ್ನರ್ ಆಗಿ, ಆರ್ಥಿಕ ಸಚಿವರಾಗಿ, ಹತ್ತು ವರ್ಷಗಳ ಕಾಲ ದೇಶದ ಪ್ರಧಾನಿಯಾಗಿ ಎಲ್ಲಾ ಹುದ್ದೆಗಳಿಗೂ ಪ್ರಾಮಾಣಿಕ ನ್ಯಾಯ ಒದಗಿಸಿದರು.ಸೋನಿಯಾಗಾಂಧಿ ಅವರು ಪ್ರಧಾನಿ ಹುದ್ದೆಯನ್ನು ತ್ಯಾಗ



ಮಾಡಿ ಆ ಹುದ್ದೆಗೆ ಮನಮೋಹನ್ ಸಿಂಗ್ ಅವರನ್ನು ಆರಿಸಿದರು. ಹತ್ತು ವರ್ಷಗಳ ಕಾಲ ದೇಶವನ್ನು ಅತ್ಯಂತ ಸದೃಡವಾಗಿ ಮುನ್ನಡೆಸಿದರು.

ಭಾರತ ಆರ್ಥಿಕ ಸಂಕಷ್ಟದಲ್ಲಿದ್ದಾಗ ಉದಾರೀಕರಣ ಜಾರಿ ಮಾಡಿ ದೇಶವನ್ನು ಆರ್ಥಿಕವಾಗಿ ಮೇಲೆತ್ತಿದರು.

ಮನಮೋಹನ್ ಸಿಂಗ್ ಅವರಿಗಿಂತ ಮೊದಲು ದೇಶದ ಆರ್ಥಿಕತೆಯನ್ನು ವಿಶ್ವ ಆರ್ಥಿಕತೆ ಜೊತೆಗೆ ಮುಕ್ತ ಮಾಡಿರಲಿಲ್ಲ. ಇವರು ಮುಕ್ತಗೊಳಿಸುವ ಮೂಲಕ ದೇಶದ ಆರ್ಥಿಕತೆಗೆ ಹೊಸ ಚೈತನ್ಯ ತುಂಬಿದರು.*ನಮ್ಮ ಸಂವಿಧಾನದ ಮೂಲಭೂತ ಆಶಯಗಳನ್ನು ಅಕ್ಷರಶಃ ಜಾರಿ ಮಡಿದರು.ಆಹಾರ ಭದ್ರತೆ, ಶಿಕ್ಷಣ ಹಕ್ಕು ಕಾಯ್ದೆ, ಮಾಹಿತಿ ಹಕ್ಕು ಕಾಯ್ದೆ ಸೇರಿದಂತೆ ಹಲವು ಮೂಲಭೂತ ಹಕ್ಕುಗಳನ್ನು ಜಾರಿಗೊಳಿಸಿ ದೇಶದ ಬಡವರು, ಮಧ್ಯಮವರ್ಗದವರನ್ನು ಆರ್ಥಿಕವಾಗಿ ಮೇಲೆತ್ತುವುದರಲ್ಲಿ ಯಶಸ್ವಿಯಾದರು.ಮನಮೋಹನ್ ಸಿಂಗ್ ಅವರ ಅಗಲಿಕೆ ಇಡೀ ವಿಶ್ವ ಆರ್ಥಿಕತೆಗೆ ಆಗಿರುವ ನಷ್ಟ.ಅಂಬೇಡ್ಕರ್ ಸ್ಕೂಲ್ ಆಫ್ ಎಕನಾಮಿಕ್ಸ್ ನಾವು ಆರಂಭಿಸಿದಾಗ ನಾವು ಮನಮೋಹನ್ ಸಿಂಗ್ ಅವರನ್ನು ಕರೆಸಿದ್ದೆವು. ಕರ್ನಾಟಕದ ಆರ್ಥಿಕತೆ ಬಗ್ಗೆ ಒಂದು ಕಾರ್ಯಕ್ರಮಕ್ಕೆ ನಾವು ಕರೆಸಿದ್ದೆವು. ಆಗ, ನಮ್ಮ ಅವಧಿಯಲ್ಲಿ ರಾಜ್ಯದ ಆರ್ಥಿಕತೆ ಅತ್ಯಂದ ಸದೃಡವಾಗಿದೆ ಎಂದು ಮೆಚ್ಚುಗೆ ಸೂಚಿಸಿದ್ದರು. ಅವರ ಜ್ಞಾನ ಭಾರತದ ಅನೇಕ ಸಮಸ್ಯೆಗಳಿಗೆ ಪರಹಾರ ಕಂಡುಕೊಳ್ಳಲು ಸಾಧ್ಯವಾಯಿತು.

ದೇಶದ ಆರ್ಥಿಕ ಸಮಸ್ಯೆಗಳನ್ನು ನಿಖರವಾಗಿ ಗ್ರಹಿಸಿ, ಪರಿಹರಿಸುತ್ತಿದ್ದ ಅವರು ನಿಗರ್ವಿ ಆಗಿದ್ದರು. ಅತ್ಯಂತ ವಿನಯಶೀಲರಾಗಿದ್ದರು.

ನಾನು ಬದುಕಿರುವಾಗ ನನ್ನ ಕೆಲಸಗಳಿಗೆ ಹೆಚ್ಚು ಮಾನ್ಯ ಸಿಗದಿದ್ದರೂ ಮುಂದೆ ನಮ್ಮ ಕೆಲಸಗಳಿಗೆ ಹೆಚ್ಚು ಮಹತ್ವ ಸಿಗಲಿದೆ ಎಂದು ಮನಮೋಹನ್ ಸಿಂಗ್ ಅವರು ಅವತ್ತೇ ಹೇಳಿದ್ದರು.



### ಆಧುನಿಕ ಭಾರತದ ಆರ್ಥಿಕತೆಯ ವಾಸ್ತುಶಿಲ್ಪಿ ಸಿಂಗ್



» **ನವದೆಹಲಿ**

ಆಧುನಿಕ ಭಾರತದ ಆರ್ಥಿಕತೆಯ ವಾಸ್ತುಶಿಲ್ಪಿ ಎಂದೇ ಪರಿಗಣಿಸಲ್ಪಟ್ಟ ಮಾಜಿ ಪ್ರಧಾನಿ ಡಾ. ಮನಮೋಹನ್ ಸಿಂಗ್ ಅವರು ಸಾಮಾನ್ಯವಾಗಿ ನೀಲಿ ಪೇಟವನ್ನು ಧರಿಸಿ ಕಾಣಿಕೊಳ್ಳುತ್ತಿದ್ದರು. ನೀಲಿ ಬಣ್ಣದ ಪೇಟವನ್ನೇ ಏಕೆ ಧರಿಸುತ್ತಾರೆ ಎಂಬ ಬಗ್ಗೆ ಆಗ್ಗಾಗ್ಗೆ ಪ್ರಶ್ನೆಗಳನ್ನು ಎದುರಿಸುತ್ತಿದ್ದರು. ಗುರುವಾರ ರಾತ್ರಿ ನಿಧನರಾದ ಮಾಜಿ ಪ್ರಧಾನಿ ಈ ಹಿಂದೆ ತಮ್ಮ ಭಾಷಣದ ವೇಳೆ ಪೇಟದ ಹಿಂದಿನ ರಹಸ್ಯವನ್ನು ಬಹಿರಂಗಪಡಿಸಿದ್ದರು. ನೀಲಿ ಪೇಟವು ತಾವು ವ್ಯಾಸಂಗ ಮಾಡಿದ ಕೇಂಬ್ರಿಡ್ಜ್ ವಿಶ್ವವಿದ್ಯಾಲಯದ ಅವರ ಅಲ್ಮಾ ಮೇಟರ್‌ಗೆ ಗೌರವ ಸೂಚಕ ಎಂದಿದ್ದರು.2006ರಲ್ಲಿ ಡಾಕ್ಟರೇಟ್ ಆಫ್ ಲಾ ಗೌರವಕ್ಕೆ ಪಾತ್ರರಾದ ಸಂದರ್ಭದಲ್ಲಿ ಈ ಹೇಳಿಕೆಗಳನ್ನು ನೀಡಿದ ಸಿಂಗ್, ತಿಳಿ ನೀಲಿ ಬಣ್ಣವು ಅವರ ನೆಚ್ಚಿನ ಬಣ್ಣಗಳಲ್ಲಿ ಒಂದಾಗಿದೆ ಮತ್ತು ಕೇಂಬ್ರಿಡ್ಜ್‌ನಲ್ಲಿನ ಅವರ ಸ್ಮರಣೀಯ ದಿನಗಳನ್ನು ಅದು ನೆನಪಿಸುತ್ತದೆ ಎಂದು ವಿವರಿಸಿದ್ದರು.ಹೆಚ್ಚಿನ ಜನರು ನೆರೆದಿದ್ದ ಕಾರ್ಯಕ್ರಮವೊಂದರಲ್ಲಿ ಪ್ರಿನ್ಸ್ ಫಿಲಿಪ್ ಅವರು ಸಿಂಗ್ ಅವರ ವಿಶಿಷ್ಟವಾದ ನೀಲಿ ಪೇಟದ ಬಗ್ಗೆ ಮಾತನಾಡಿದ್ದರು. 'ಅವರ ಪೇಟದ ಬಣ್ಣವನ್ನು ನೋಡಿ' ಡ್ಯೂಕ್ ಹೇಳಿದರು. ಇದು ಪ್ರೇಕ್ಷಕರ ಚಪ್ಪಾಳೆಗೆ ಕಾರಣವಾಯಿತು. ಆಕ್ಷಣ ಉತ್ತರಿಸಿದ ಸಿಂಗ್, ಅದೇ ಬಣ್ಣ ಏಕೆ ಮತ್ತು ತನಗೂ ಆ ಬಣ್ಣಕ್ಕೂ ಇರುವ ಸಂಬಂಧ ಎಂತದ್ದು ಎಂಬುದನ್ನು ವಿವರಿಸಿದ್ದರು.'ತಿಳಿ ನೀಲಿ ಬಣ್ಣವು ನನ್ನ ಮೆಚ್ಚಿನವುಗಳಲ್ಲಿ ಒಂದಾಗಿದೆ ಮತ್ತು ಹೀಗಾಗಿ ಅದು ಪೇಟವಾಗಿ ನನ್ನ ತಲೆಯ ಮೇಲೆ ಹೆಚ್ಚಾಗಿ ಕಂಡುಬರುತ್ತದೆ' ಎಂದು ಸಿಂಗ್ ನಗುತ್ತಾ ಹೇಳಿದರು. ಅವರ ಟ್ರೇಡ್‌ಮಾರ್ಕ್ ಆಗಿರುವ ಬಣ್ಣದ ಬಗೆಗೆ ಅವರ ಒಲವನ್ನು ಉಲ್ಲೇಖಿಸಿದರು.ಕೇಂಬ್ರಿಡ್ಜ್‌ನಲ್ಲಿದ್ದಾಗ ಅವರ ಗೆಳೆಯರು ಪ್ರೀತಿಯಿಂದ ಅವರಿಗೆ 'ಬ್ಲೂ ಟರ್ಬನ್' ಎಂದು ಅಡ್ಡಹೆಸರು ನೀಡಿದ್ದರು ಎಂಬುದನ್ನು ನೆನಪಿಸಿಕೊಂಡರು. ತನ್ನಲ್ಲಿ ಮುಕ್ತ ಮನಸ್ಸು, ನಿರ್ಭಯತೆ ಮತ್ತು ಬೌದ್ಧಿಕ ಕುತೂಹಲದ ಮೌಲ್ಯಗಳನ್ನು ಹುಟ್ಟುಹಾಕಿದ ಕೀರ್ತಿ ಕೇಂಬ್ರಿಡ್ಜ್‌ನಲ್ಲಿನ ತನ್ನ ಶಿಕ್ಷಕರು ಮತ್ತು ಗೆಳೆಯರಿಗೆ ಸಲ್ಲುತ್ತದೆ. ತಾವು ಕೇಂಬ್ರಿಡ್ಜ್‌ನಲ್ಲಿದ್ದ ಸಮಯದಲ್ಲಿ ತಮ್ಮೊಂದಿಗೆ ಇದ್ದ ನಿಕೋಲಸ್ ಕಾಲ್ಡೋರ್, ಜೋನ್ ರಾಬಿನ್ಸನ್ ಮತ್ತು ಅಮರ್ತ್ಯ ಸೇನ್ ಅವರಂತಹ ಗಮನಾರ್ಹ ಅರ್ಥಶಾಸ್ತ್ರಜ್ಞರನ್ನು ನಿರ್ದಿಷ್ಟವಾಗಿ ಉಲ್ಲೇಖಿಸಿದರು.

ಸಿಂಗ್ ತಮ್ಮ ಭಾಷಣವನ್ನು ಮುಕ್ತಾಯಗೊಳಿಸುತ್ತಿದ್ದಂತೆ, ಪ್ರೇಕ್ಷಕರು ಚಪ್ಪಾಳೆ ತಟ್ಟಿದರು ಮತ್ತು ಅವರು ತಮ್ಮ ಪ್ರೀತಿಯ ವಿಶ್ವವಿದ್ಯಾನಿಲಯದಿಂದ ಮನ್ನಣೆಯನ್ನು ಅಂಗೀಕರಿಸಿದರು.

## ಫಾಸ್ಟ್ ನ್ಯೂಸ್

### ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯಾಧ್ಯಕ್ಷರಾಗಿ 'ಸಿ.ಎಸ್ ಷಡಕ್ಷರಿ' ಆಯ್ಕೆ

» **ಬೆಂಗಳೂರು**

ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಚುನಾವಣೆಯಲ್ಲಿ ಸಿಎಸ್ ಷಡಕ್ಷರಿ ಭರ್ಜರಿ ಗೆಲುವು ಸಾಧಿಸಿದ್ದಾರೆ. ಈ ಮೂಲಕ ಮತ್ತೊಮ್ಮೆ ಅವಧಿಗೆ ರಾಜ್ಯಧ್ಯಕ್ಷರಾಗಿ ಕೆಲಸ ಮಾಡಲಿದ್ದಾರೆ. ಇಂದು ನೆಡೆದ ಸರ್ಕಾರಿ ನೌಕರರ ಸಂಘದ ರಾಜ್ಯಾಧ್ಯಕ್ಷರ ಚುನಾವಣೆಯಲ್ಲಿ ಸಿ ಎಸ್.ಷಡಕ್ಷರಿ (507 ಮತಗಳು ) ಹತ್ತಿರದ ಪ್ರತಿಸ್ಪರ್ಧಿ ಕೃಷ್ಣ ಗೌಡ (442 ಮತಗಳು )ಅವರಿಗಿಂತ 65 ಹೆಚ್ಚಿನ ಮತದ ಅಂತರದಿಂದ ಮತ್ತೊಮ್ಮೆ ರಾಜ್ಯಾಧ್ಯಕ್ಷರಾಗಿ ಆಯ್ಕೆ ಆಗಿದ್ದಾರೆ. ರಾಜ್ಯ ಸರ್ಕಾರಿ ನೌಕರರ ಸಂಘದ ಖಜಾಂಜಿ ಸ್ಥಾನದ ಚುನಾವಣೆಯಲ್ಲಿ ಶಿವರುದ್ರಯ್ಯ ವಿ. ವಿ. (485 ಮತಗಳು ) ರವರು ಹತ್ತಿರದ ಪ್ರತಿಸ್ಪರ್ಧಿ ನಾಗರಾಜ ಆರ್ ಜುಮ್ಮನವರ್ (467 ಪಡೆದ ಮತಗಳು ) ರವರಿಗಿಂತ 18 ಮತಗಳ ಅಂತರದಿಂದ ಶಿವರುದ್ರಯ್ಯ ವಿ. ವಿ. ಅವರು ಗೆದ್ದು ಬೀಗಿದ್ದಾರೆ. ಇನ್ನೂ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯಾಧ್ಯಕ್ಷರಾಗಿ ಆಯ್ಕೆಯಾದ ಸಿ ಎಸ್. ಷಡಕ್ಷರಿ ಅವರಿಗೆ ಹಾಗೂ ಖಜಾಂಜಿಯಾಗಿ ಆಯ್ಕೆಯಾದ ಶಿವರುದ್ರಯ್ಯ ವಿ. ವಿ. ಅವರಿಗೆ ಸಾಗರ ತಾಲ್ಲೂಕು ಸರ್ಕಾರಿ ನೌಕರರ ಸಂಘದ ಅಧ್ಯಕ್ಷರಾದ ಸಂತೋಷ ಕುಮಾರ್ ಎನ್, ರಾಜ್ಯ ಪರಿಷತ್ ಸದಸ್ಯರು ದೇವೇಂದ್ರಪ್ಪ ಕೆ, ಖಜಾಂಚಿ ಸಹದೇವ ಎಸ್ ಬಡಿಗೇರ, ಪ್ರಧಾನ ಕಾರ್ಯದರ್ಶಿ ಅಣ್ಣಪ್ಪ ಡಿ. ಕೆ. ತಮ್ಮಣ್ಣ ಕೆಳದಿ, ರಾಜ್ಯ ಪರಿಷತ್ ಸದಸ್ಯರುಗಳು ಅಭಿನಂದನೆಗಳನ್ನೂ ಸಲ್ಲಿಸಿದ್ದಾರೆ.

### 4ನೇ ರಾಜ್ಯಮಟ್ಟದ ವೈಜ್ಞಾನಿಕ ಸಮ್ಮೇಳನ

» **ಚಿತ್ರದುರ್ಗ**

ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್‌ವತಿಯಿಂದ ಡಿ. 28 ಮತ್ತು 29 ರಂದು ಆಯೋಜಿಸಲಾಗಿದ್ದ 4ನೇ ರಾಜ್ಯಮಟ್ಟದ ವೈಜ್ಞಾನಿಕ ಸಮ್ಮೇಳನವನ್ನು ದೇಶದ ಮಾಜಿ ಪ್ರಧಾನ ಮಂತ್ರಿಗಳಾದ ಡಾ. ಮನಮೋಹನ್ ಸಿಂಗ್‌ರವರ ನಿಧನದ ಕಾರಣದಿಂದಾಗಿ 2025ರ ಜನವರಿ 3 ಮತ್ತು 4 ನೇ ತಾರೀಕಿಗೆ ಮುಂದೂಡಲಾಗಿದೆ ಎಂದು ಪರಿಷತ್‌ನ ಜಿಲ್ಲಾ ಅಧ್ಯಕ್ಷ ನಾಗರಾಜ್ ಸಂಗಮ್ ತಿಳಿಸಿದ್ದು, ಸಮ್ಮೇಳನದ ದಿನಾಂಕ ಮಾತ್ರ ಬದಲಾವಣೆಯಾಗಿದ್ದು ಉಳಿದಂತೆ ಕಾರ್ಯಕ್ರಮದಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ. ಎಲ್ಲರೂ ಸಹಕರಿಸುವಂತೆ ಕೋರಿದ್ದಾರೆ.

**ಸಂತಾಪ :** ದೇಶದ ಮಾಜಿ ಪ್ರಧಾನ ಮಂತ್ರಿಗಳಾದ ಡಾ. ಮನಮೋಹನ್ ಸಿಂಗ್‌ರವರ ನಿಧನಕ್ಕೆ ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್‌ನ ಜಿಲ್ಲಾ ಘಟಕ ಅಧ್ಯಕ್ಷರಾದ ನಾಗರಾಜ್ ಸಂಗಮ್ಮ ಮತ್ತು ಪದಾಧಿಕಾರಿಗಳು ಸಂತಾಪವನ್ನು ಸೂಚಿಸಿದ್ದು, ದೇಶದ ಕಂಡು ಆರ್ಥಿಕ ತಜ್ಞರಾಗಿದ್ದು ದೇಶವನ್ನು ಅವರ ಆಡಳಿತದ ಅವಧಿಯಲ್ಲಿ ಪ್ರಗತಿಯತ್ತ ಕೊಂಡ್ಯೂದಿದ್ದರು ಎಂದು ಅವರ ಆಡಳಿತಾವಧಿಯನ್ನು ಸ್ಮರಿಸಿದರು.

### ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ

» **ದಾವಣಗೆರೆ**

ಪ್ರಸಕ್ತ ಸಾಲಿನ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯನ್ನು ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಶಾಮನೂರು.ಟಿ.ಬಸವರಾಜ್ ಇವರ ಅಧ್ಯಕ್ಷತೆಯಲ್ಲಿ ಡಿ.30 ರಂದು ಮಧ್ಯಾಹ್ನ 2 ಗಂಟೆಗೆ ಜಿಲ್ಲಾ ಪಂಚಾಯತಿಯ ಎಸ್.ಎಸ್. ಎಂ.ಸಭಾಂಗಣದಲ್ಲಿ ಆಯೋಜಿಸಲಾಗಿದೆ ಎಂದು ಜಿ.ಪಂ.ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ.ಬಿ.ಇಟ್ನಾಳ್ ತಿಳಿಸಿದ್ದಾರೆ.

### ಡಿ.31 ನೇರ ನೇಮಕಾತಿ

» **ಚಿತ್ರದುರ್ಗ**

ಡಿ.31ರ ಮಂಗಳವಾರ ಬೆಳಿಗ್ಗೆ 10 ರಿಂದ ಮಧ್ಯಾಹ್ನ 2 ರವರೆಗೆ ನಗರದ ಉದ್ಯೋಗ ವಿನಿಮಯ ಕೇಂದ್ರದಲ್ಲಿ ನೇರ ನೇಮಕಾತಿ ಸಂದರ್ಶನ ನಡೆಯಲಿದೆ. ಮೂರಕ್ಕೂ ಹೆಚ್ಚು ಖಾಸಗಿ ಕಂಪನಿಗಳು ತಮ್ಮ ಸಂಸ್ಥೆಯಲ್ಲಿ ಕಾರ್ಯನಿರ್ವಹಿಸಲು ಎಸ್.ಎಸ್.ಎಲ್.ಸಿ, ಪಿಯುಸಿ, ಡಿಪ್ಲೋಮೋ, ಐಟಿಐ, ಯಾವುದೇ ಪದವಿ ಹೊಂದಿರುವ 18 ರಿಂದ 30 ವರ್ಷದೊಳಗಿನ ಪುರುಷ ಅಥವಾ ಮಹಿಳೆ ಅಭ್ಯರ್ಥಿಗಳನ್ನು ನೇರವಾಗಿ ಆಯ್ಕೆ ಮಾಡಿಕೊಳ್ಳಲಿದ್ದು, ಅಭ್ಯರ್ಥಿಗಳು 5 ಬಯೋಡಾಟಾ ಪ್ರತಿ, ವಿದ್ಯಾರ್ಹತೆಯ ಪ್ರಮಾಣ ಪತ್ರಗಳು ಹಾಗೂ ಫೋಟೋಗಳೊಂದಿಗೆ ಭಾಗವಹಿಸಬಹುದು. ಹೆಚ್ಚಿನ ಮಾಹಿತಿಗಾಗಿ ನಗರದ ಸ್ಟೇಡಿಯಂ ತಿರುವು, ಹಳೇ ವೈಶಾಲಿ ಗೇಟ್ ಹತ್ತಿರದ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ಕಚೇರಿ ದೂರವಾಣಿ ಸಂಖ್ಯೆ 7022459064, 8105619020, 9945587060, 9964528212, 7019755147 ಗೆ ಸಂಪರ್ಕಿಸಬಹುದು

### ಸರ್ವ ಸದಸ್ಯರ ಸಭೆ

» **ಚಿತ್ರದುರ್ಗ**

2023–24 ನೇ ಸಾಲಿನ ಬ್ರಾಹ್ಮಣ ಸಂಘದ ಸರ್ವ ಸದಸ್ಯರ ಸಭೆ ದಿನಾಂಕ : 29–12–2024 ನೇ ಭಾನುವಾರ ಬೆಳಿಗ್ಗೆ 10–30 ಕ್ಕೆ ಗಾಯತ್ರಿ ಕಲ್ಯಾಣ ಮಂಟಪದಲ್ಲಿ ಕರೆಯಲಾಗಿದೆ. ಸರ್ವ ಸದಸ್ಯರು ತಪ್ಪದೆ ಸಭೆಯಲ್ಲಿ ಭಾಗವಹಿಸುವಂತೆ ಚಿತ್ರದುರ್ಗ ಬ್ರಾಹ್ಮಣ ಸಂಘದ ಪರವಾಗಿ ಕಾರ್ಯದರ್ಶಿ ಡಿ.ಜಿ.ಪ್ರಾಣೇಶ್‌ರಾವ್ ಕೋರಿದ್ದಾರೆ.

# ಶರಣ ಸಾಹಿತ್ಯ ಪರಿಷತ್ತಿನ 13ನೇ ಸಮ್ಮೇಳನದ ಸರ್ವಾಧ್ಯಾಕ್ಷರಾಗಿ ಡಾ.ಸಿದ್ದರಾಮ ಬೆಲ್ದಾಳ ಆಯ್ಕೆ

» **ಚಿತ್ರದುರ್ಗ**

ಚಿತ್ರದುರ್ಗದ ಬೃಹನ್ಮಠದ ಅನುಭವ ಮಂಟಪದಲ್ಲಿ ನಡೆಯಲಿರುವ ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತಿನ 13ನೇಸಮ್ಮೇಳನದ ಸರ್ವಾಧ್ಯಾಕ್ಷರಾಗಿ ಡಾ.ಸಿದ್ದರಾಮ ಬೆಲ್ದಾಳ ರವರನ್ನು ಆಯ್ಕೆ ಮಾಡಲಾಗಿದೆ ಎಂದು ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತಿನ ರಾಜ್ಯಾಧ್ಯಕ್ಷರಾದ ಡಾ.ಸಿ.ಸೋಮೇಶೇಖರ್ ತಿಳಿಸಿದರು.



ಚಿತ್ರದುರ್ಗ ನಗರದ ಬೃಹನ್ಮಠದಲ್ಲಿ ಸುದ್ದಿಗೋಷ್ಠಿಯಲ್ಲಿ ಈ ಮಾಹಿತಿ ನೀಡಿದ ಅವರು ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತಿನ ಸಂಸ್ಥಾಪಕರಾದ ಸುತ್ತೂರಿನ ಡಾ, ಶ್ರೀ ಶಿವರಾತ್ರಿ ರಾಜೇಂದ್ರ ಶ್ರೀಗಳು ಡಾ. ಸಿದ್ದರಾಮ ಬೆಲ್ದಾಳ್‌ರವರ ಆಯ್ಕೆಯನ್ನು ಪ್ರಕಟಿಸಿದ್ದಾರೆ. ಇವರು ಶರಣ ಸಾಹಿತ್ಯದ ಬಗ್ಗೆ ಧರ್ಮಾಂಧತೆ, ಕೋಮು ಗಲಭೆ, ಭಯೋತ್ಪಾದನೆಗಳ ನಿರ್ಮೂಲನೆಗೆ ಆಸಕ್ತಿಯನ್ನು ವಹಿಸಿ ಮಾನವೀಯ ಏಕತೆ ಉದ್ದೇಶದಿಂದ ಏಕತಾ ಪರಿಷತ್ತನ್ನು ಸ್ಥಾಪಿಸುವುದರ ಮೂಲಕ ಶರಣರು ಪ್ರತಿಪಾದಿಸಿದ ಸಮಾನತೆಯ ಸಮಾಜದ ನಿರ್ಮಾಣದ ದಿಸೆಯಲ್ಲಿ ಪ್ರಮಾಣಿಕ ಪ್ರಯತ್ನವನ್ನು ನಿರ್ವಹಿಸುತ್ತಾ ಬಂದಿದ್ಧಾರೆ ಎಂದಿದ್ದಾರೆ.

ಪರಮಪೂಜ್ಯರು ಔಪಚಾರಿಕ ಶಿಕ್ಷಣವನ್ನು ಹೆಚ್ಚು ಪಡೆಯದೇ ಇದ್ದರೂ ಆಧ್ಯಾತ್ಮಿಕ ಶಿಕ್ಷಣದಲ್ಲಿ ಬಹುದೊಡ್ಡ ಸಾಧನೆಯನ್ನುಮಾಡಿರುವವರು. ಅವರು ಶರಣ ಸಾಹಿತ್ಯಕ್ಕೆ ಸಂಬಂದಿಸಿದಂತೆ ಹಲವಾರು ಮೌಲಿಕ ಕೃತಿಗಳನ್ನು ರಚಿಸುವ ಮೂಲಕ ಶರಣ ಸಾಹಿತ್ಯಕ್ಕೆ ವಿಶೇಷವಾದಂತಹ ಕೊಡುಗೆಯನ್ನು ನೀಡಿರುತ್ತಾರೆ. ವಚನ ತತ್ವಸಾರ, ಇಷ್ಟಲಿಂಗಾರ್ಚನೆ ವಿಧಾನ, ಷಟ್‌ಸ್ಥಳ ಸಂಪತ್ತು, ವಚನ ತತ್ವಾನುಭವ, ಬಸವ ತತ್ವ ಪ್ರದೀಪಿಕೆ, ಶಿವಯೋಗ ಸುಖ, ಶರಣರ ಬೆಡಗಿನ ಬೆಳಕು, ಚನ್ನಬಸವಣ್ಣನವರ ವಚನ ವ್ಯಾಖ್ಯಾನ, ಶೂನ್ಯ ಸಂಪಾದನೆಯ ರಹಸ್ಯದ ಬಗ್ಗೆ ಬೃಹತ್ ಗ್ರಂಥ ರಚನೆ. ಅಕ್ಕಮಹಾದೇವಿ–



ಯೋಗಾಂಗ ತ್ರಿವಿಧಿಯ ತವನಿಧಿ, ವಚನಗಳಲ್ಲಿ ಶಿವಯೋಗ, ಮುಂತಾದ ಅತ್ಯಂತ ಶ್ರೇಷ್ಠ ಕೃತಿಗಳನ್ನು ಶರಣ ಸಾಹಿತ್ಯ ಲೋಕಕ್ಕೆ ಕೊಡುಗೆಯಾಗಿ ನೀಡಿರುತ್ತಾರೆ ಎಂದರು.

ಮೂಲತಃ ಶೋಷಿತ ಸಮುದಾಯದಲ್ಲಿ ಜನಿಸಿದ ಇವರು ಶರಣ ತತ್ವ ಪ್ರಸಾರದ ಮೂಲಕ ದಲಿತರ ಮೇಲಿನ ಶೋಷಣೆಯ ಬಗ್ಗೆ ತಮ್ಮದೇ ಆದ ರೀತಿಯಲ್ಲಿ ದನಿ ಎತ್ತುತ್ತಲೇ ಇದ್ದಾರೆ. ಪೂಜ್ಯರ ಸಾಹಿತ್ಯ ಮತ್ತು ಸಮಾಜಸೇವೆಯನ್ನು ಗುರುತಿಸಿ ನಾಡಿನ ಅನೇಕ ಪ್ರತಿಷ್ಠಿತ ಸಂಸ್ಥೆಗಳು ಮತ್ತು ಸರ್ಕಾರ ಅವರಿಗೆ ಹಲವಾರು ಪ್ರತಿಷ್ಠಿತ ಪ್ರಶಸ್ತಿಗಳನ್ನು ನೀಡಿ ಗೌರವಿಸಿದೆ. ಚಿತ್ರದುರ್ಗದ ಮಠದವರು ನೀಡುವ ಮೊದಲ ಬಸವ ಶ್ರೀ ಪ್ರಶಸ್ತಿ, ಕುಮಾರ ಕಕ್ಕಯ್ಯ ಪ್ರಶಸ್ತಿ, ಕಂಬಳೇ ಬಾಬಾ ಪ್ರಶಸ್ತಿ, ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ, ಬೀದರ್ ಜಿಲ್ಲಾ ಪ್ರಶಸ್ತಿ, ಅನುಭವ ಮಂಟಪ ಪ್ರಶಸ್ತಿ, ಕಾಯಕ ಪ್ರಶಸ್ತಿ, ಸುವರ್ಣ ಸಿರಿ. ಹಳಕಟ್ಟಿ ಪ್ರಶಸ್ತಿ, ಮೃತ್ಯುಂಜಯ ಪ್ರಶಸ್ತಿ, ಮುಂತಾದ ಪ್ರತಿಷ್ಠಿತ ಪ್ರಶಸ್ತಿಗೆ ಭಾಜನರಾದ ಅವರಿಗೆ ಕಲಬುರಗಿ ವಿಶ್ವವಿದ್ಯಾನಿಲಯವು ಗೌರವ ಡಾಕ್ಟರೇಟ್ ನೀಡಿ ಗೌರವಿಸಿದೆ ಎಂದು ಸೋಮಶೇಖರ್ ತಿಳಿಸಿದರು.

ಅವರ "ಸತ್ಯ ಶರಣರು ಸತ್ಯ ಶೋಧ." ಸುಮಾರು 1400 ಪುಟಗಳ ಬೃಹತ್ ಗ್ರಂಥವು ಮುದ್ರಣದ ಹಂತದಲ್ಲಿದೆ. ಬೆಲ್ದಾಳ ಶರಣರನ್ನು ಕುರಿತು ಕೆಲವು ವಿದ್ಯಾರ್ಥಿಗಳು ಎಂ.ಫಿಲ್ ಮತ್ತು ಪಿಹೆಚ್.ಡಿ ಪದವಿಯನ್ನು ಸಹ ಪಡೆದುಕೊಂಡಿರುವುದು ಅವರ ವ್ಯಕ್ತಿತ್ವದ ಘನತೆಗೆ ಸಂದ ಗೌರವವಾಗಿದೆ. ಶರಣ ಸಾಹಿತ್ಯದಲ್ಲಿ ಅಪಾರವಾದ ಕೃಷಿಯನ್ನು ನಡೆಸಿ ಶರಣ ಸಾಹಿತ್ಯದ ಬಗ್ಗೆ ಸುದೀರ್ಘ ಅಧ್ಯಯನ ಮಾಡಿ ಶರಣ ಸಾಹಿತ್ಯದ ಬಗ್ಗೆ ಅತ್ಯಂತ ಪ್ರಬುದ್ಧವಾಗಿ ಪ್ರವಚನ ಮಾಡಬಲ್ಲ ಪೂಜ್ಯರು ಶರಣ ತತ್ವ ಪ್ರಸಾರಕ್ಕಾಗಿಯೇ ತಮ್ಮ ಇಡೀ ಬದುಕನ್ನು ಸಮರ್ಪಿಸಿಕೊಂಡಿರುತ್ತಾರೆ ಎಂದು ತಿಳಿಸಿದರು.

ಗೋಷ್ಠಿಯಲ್ಲಿ ಚಿತ್ರದುರ್ಗ ಮುರುಘಾರಾಜೇಂದ್ರಬೃಹನ್ಮಠದಸದಸ್ಯರು ಸಮ್ಮೇಳನದ ಸ್ವಾಗತ ಸಮಿತಿಯ ಗೌರವ ಸಲಹೆಗಾರರಾದ ಡಾ.ಬಸವಕುಮಾರ ಶ್ರೀಗಳು, ಗುರುಮಠಕಲ್ ಶಾಂತವೀರ ಗುರು ಮುರುಘರಾಜೇಂದ್ರ ರಾಜೇಂದ್ರ ಮಹಾಸ್ವಾಮಿಗಳು, ಶರಣ ಸಾಹಿತ್ಯ ಪರಿಷತ್‌ನ ಜಿಲ್ಲಾಧ್ಯಕ್ಷರು ಸ್ವಾಗತ ಸಮಿತಿಯ ಪ್ರಧಾನ ಕಾರ್ಯದರ್ಶಿಗಳಾದ ಡಾ.ಕೆ. ಎಂ.ವಿರೇಶ್, ಡಾ. ಹೋನ್ನಲಿಂಗಯ್ಯ, ಖಂಜಾಚಿ ಎಸ್. ಷಣ್ಮುಖಪ್ಪ, ಹಂಪಯ್ಯ ಸಾರಂಗಮಠ, ಅಪ್ಪರಾವ್ ಅಕ್ಕೊಣಿ ಷಡಾಕ್ಷರಯ್ಯ, ರುದ್ರಮುನಿ, ಗಣೇಶಯ್ಯ ಭಾಗವಹಿಸಿದ್ದರು.

## ಅಭಿಷೇಕ್ ನಗರದ ಸಂಪರ್ಕ ರಸ್ತೆ ಒತ್ತುವರಿ: ಜಿಲ್ಲಾಧಿಕಾರಿ ಭೇಟಿ ಪರಿಶೀಲನೆ

» **ಚಳ್ಳಕೆರೆ**

ಚಳ್ಳಕೆರೆ ನಗರದ ಅಭಿವೃದ್ದಿಯೂ ಸೇರಿದಂತೆ ಸಾರ್ವಜನಿಕರ ಕೆಲಸ ಕಾರ್ಯಗಳಿಗೆ ಯಾರೂ ಅಡ್ಡಿಪಡಿಸದಂತೆ ಎಚ್ಚರಿಕೆ ವಹಿಸಬೇಕು. ಸರ್ಕಾರದ ಕೆಲಸಕ್ಕೆ ದುರುದ್ದೇಶದಿಂದ ಅಡ್ಡಿಪಡಿಸಲು ಯತ್ನಿಸಿದವರ ವಿರುದ್ದ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆಯನ್ನು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ನೀಡಿದ್ದಾರೆ.



ಅವರು, ಶುಕ್ರವಾರ ಬೆಳ್ಳಂಬೆಳಗ್ಗೆ ಬಳ್ಳಾರಿ ರಸ್ತೆಯ ಅಭಿಷೇಕ್ ನಗರಕ್ಕೆ ಭೇಟಿ ನೀಡಿ ರಾಷ್ಟ್ರೀಯ ಹೆದ್ದಾರಿಯಿಂದ ಅಭಿಷೇಕ್ ನಗರಕ್ಕೆ ಹೋಗುವ ದಾರಿಯಲ್ಲಿ ಸರ್ಕಾರಿ ಗೋಮಾಳವಿದ್ದು ಖಾಸಗಿ ವ್ಯಕ್ತಿಯೊಬ್ಬ ಗೋಮಾಳವನ್ನು ಅಕ್ರಮಿಸಿಕೊಂಡು ರಸ್ತೆ ಬಿಡಲು ತಕರಾರುವೆತ್ತಿದ ಹಿನ್ನೆಲೆಯಲ್ಲಿ ಸ್ಥಳಕ್ಕೆ ಭೇಟಿ ನೀಡಿದ ಅಧಿಕಾರಿ ತಹಶೀಲ್ದಾರ್, ಪೌರಾಯುಕ್ತರ ಮತ್ತು ಸರ್ವೆ ಇಲಾಖೆ ಅಧಿಕಾರಿಗಳಿಗೆ ನಿರ್ದೇಶಕ ನೀಡಿ ಕೂಡಲೇ ಇಂದೇ ಮಾರ್ಕ್ ಮಾಡಿ ರಸ್ತೆ ನಿರ್ಮಿಸುವ ವ್ಯವಸ್ಥೆ ಮಾಡುವಂತೆ ಸೂಚನೆ ನೀಡಿದರು. ಅಡ್ಡಿಪಡಿಸಲು ಯತ್ನಿಸಿದರೆ ಅಂತಹವರ ವಿರುದ್ದ ಪ್ರಕರಣ ದಾಖಲಿಸಿ ಎಂದು ಸೂಚನೆ ನೀಡಿದರು.

ತಹಶೀಲ್ದಾರ್ ರೇಹಾನ್ ಪಾಷ ಮಾತನಾಡಿ, ಕಳೆದ ಮೂರು ದಿನಗಳ ಹಿಂದೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಸಂದರ್ಭದಲ್ಲಿ ಅವರಿಗೆ ಸೂಚನೆ ನೀಡಲಾಯಿತು. ಆದರೂ ಸಹ ಅವರು ರಸ್ತೆ ಬಿಟ್ಟುಕೊಡಲು ಸಿದ್ದರಿಲ್ಲ. ಆದ್ದರಿಂದ ಕೂಡಲೇ ಸಾರ್ವಜನಿಕರ ಹಿತದೃಷ್ಠಿಯಿಂದ ರಸ್ತೆ ನಿರ್ಮಿಸಲಾಗುವುದು. ಈ ಬಗ್ಗೆ ಈಗಾಗಲೇ ಶಾಸಕ ಟಿ.ರಘುಮೂರ್ತಿ ಸಹ ಸೂಚನೆ ನೀಡಿದ್ದಾರೆ. ಸರ್ಕಾರಿ ಗೋಮಾಳ ಕಬಳಿಕೆಯಿಂದ ನಿವಾಸಿಗಳು ಸುತ್ತಿಬಳಿಸಿ ಅಭಿಷೇಕ್ ನಗರಕ್ಕೆ ಹೋಗಬೇಕಿದೆ. ನೇರ ರಸ್ತೆಯಾದರೆ ಎಲ್ಲರಿಗೂ ಅನುಕೂಲವಾಗಲಿದೆ ಎಂದರು.

ನಗರಸಭೆ ಅಧ್ಯಕ್ಷೆ ಜೈತುಂಬಿ, ಪೌರಾಯುಕ್ತ ಎಚ್.ಜಿ.ಜಗರೆಡ್ಡಿ, ಸಹಾಯಕ ಇಂಜಿನಿಯರ್ ಲೋಕೇಶ್, ಸರ್ವೆ ಅಧಿಕಾರಿ ಪ್ರಸನ್ನಕುಮಾರ್ ಮುಂತಾದವರು ಉಪಸ್ಥಿತರಿದ್ದರು.



ಚಳ್ಳಕೆರೆಯ ಹಳೇನಗರದ ವರಗೇಲಮ್ಮ ದೇವಿಯ ಕಾರ್ತಿಕಮಾಸದ ಹಿನ್ನೆಲೆಯಲ್ಲಿ ಗ್ರಾಮ ದೇವರುಗಳಾದ ಚಳ್ಳಕೆರೆಯಮ್ಮ, ಉಡಸಲಮ್ಮ ದೇವರುಗಳನ್ನು ಮೆರವಣಿಗೆ ಮೂಲಕ ವರಗೇಲಮ್ಮ ದೇವಸ್ಥಾನಕ್ಕೆ ಕರೆತರಲಾಯಿತು.

## ಚಳ್ಳಕೆರೆ ರಾಜಕಾಲುವೆ ಮಾರ್ಗವನ್ನು ಪರಿಶೀಲನೆ ನಡೆಸಿದ ಜಿಲ್ಲಾಧಿಕಾರಿ: 2.50 ಕೋಟಿ ವೆಚ್ಚದಲ್ಲಿ ದುರಸ್ಥಿಕಾರ್ಯಕ್ಕೆ ಸರ್ಕಾರಕ್ಕೆ ವರದಿ



» **ಚಳ್ಳಕೆರೆ**

ನಗರೋತ್ಥಾನ ಯೋಜನೆಯಲ್ಲಿ ಸುಮಾರು 2.50 ಕೋಟಿ ಹಣ ರಾಜಕಾಲುವೆ ದುರಸ್ಥಿತಿಗಾಗಿ ಮಂಜೂರಾಗಿದ್ದು, ಈ ಬಗ್ಗೆ ಈಗಾಗಲೇ ಸರ್ಕಾರಕ್ಕೆ ದಾಖಲಾತಿ ಸಲ್ಲಿಸಲಾಗಿದೆ. ಅದರಲ್ಲಿ ಕೆಲವೊಂದು ಲೋಪದೋಷಗಳು ಕಂಡುಬಂದ ಹಿನ್ನೆಲೆಯಲ್ಲಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಜಿಲ್ಲಾಧಿಕಾರಿಗಳು ನಗರೋತ್ಥಾನ ಯೋಜನೆಯಡಿ ಈ ಕಾಮಗಾರಿಗಳನ್ನು ತುರ್ತಾಗಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ದಾಖಲಾತಿಗಳನ್ನು ಕಳಿಸುವಂತೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೂಚನೆ ನೀಡಿದರು. ಕಳೆದ ಎರಡು ತಿಂಗಳಹಿಂದೆ ಈ ಭಾಗದಲ್ಲಿ ದಾಖಲೆಯ ಮಳೆಯಾದಾಗ ರಹೀಂನಗರ, ಸೂಜಿಮಲ್ಲೇಶ್ವರನಗರ, ಕಾಟಪ್ಪನಹಟ್ಟಿಗೊಲ್ಲರಹಟ್ಟಿ, ಪಾವಗಡ ರಸ್ತೆಯ ಸ್ಮಶಾನದ ಒಳಭಾಗಕ್ಕೆ ಭಾ ಪ್ರಮಾಣದ ನೀರು ನುಗ್ಗಿ ಅಪಾಯದ ಮುನ್ಸೂಚನೆಯನ್ನು ನೀಡಿತ್ತು. ಈ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿಗಳು ಮುಂದಿನ ದಿನಗಳಲ್ಲಿ ಮತ್ತೆ ಮಳೆಯಾದಾಗ ಸಾರ್ವಜನಿಕರು ತೊಂದರೆಗೆ ಸಿಲುಕುತ್ತಾರೆ. ಇದಕ್ಕೆ ಶಾಶ್ವತ ಪರಿಹಾರದ ಅವಶ್ಯಕತೆ ಇದ್ದು, ಕೂಡಲೇ ದಾಖಲಾತಿ ಸಲ್ಲಿಸುವಂತೆ ನಿರ್ದೇಶನ ನೀಡಿದರು.

**ದೊಡ್ಡಉಳ್ಳಾರ್ತಿಗೆ ಭೇಟಿ :** ತಾಲ್ಲೂಕಿನ ತಳಕು ಹೋಬಳಿಯ ದೊಡ್ಡಉಳ್ಳಾರ್ತಿ, ರಂಗವ್ವನಹಳ್ಳಿ ರಸ್ತೆಯ ಮಧ್ಯಭಾಗದಲ್ಲಿ ಕಲ್ಲಿನಿಂದ ಕೆತ್ತಿನ ಹಲವಾರು ಶಾಸನಗಳಿದ್ದು ಇದನ್ನು ಪರಿಶೀಲಿಸಿದ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಜಿಲ್ಲಾಡಳಿತದಿಂದ ಇವುಗಳ ರಕ್ಷಣೆಗೆ ಕ್ರಮಕೈಗೊಳ್ಳುವ ಭರವಸೆ ನೀಡಿದರು. ಹಲವಾರು ಗ್ರಾಮಸ್ಥರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದು ಜಿಲ್ಲಾಧಿಕಾರಿಗಳ ನಿರ್ಧಾರಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು. ಶಿರಸ್ಥೇದಾರ್ ಗಿರೀಶ್, ಎಇಇ ಕೆ.ವಿನಯ್ ಮುಂತಾದವರು ಇದ್ದರು.

**ಪ್ರಮುಖ ಸುದ್ದಿ**

# ವೈದ್ಯಕೀಯ ವೃತ್ತಿ ಅತ್ಯಂತ ಪವಿತ್ರವಾದುದು: ಸ್ವಾಮೀಜಿ

» **ಹೊಳಲ್ಕೆರೆ**

ವೈದ್ಯಕೀಯ ವೃತ್ತಿ ಅತ್ಯಂತ ಪವಿತ್ರವಾದುದು ಅಮೂಲ್ಯವಾದ ಪ್ರಾಣ ಉಳಿಸುವ ಜವಾಬ್ದಾರಿ ವೈದ್ಯರುಗಳ ಮೇಲಿದೆ ಎಂದು ಸಾಣೆಹಳ್ಳಿಯ

ಡಾ.ಪಂಡಿತಾರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳು ಹೇಳಿದರು.

ಕರ್ನಾಟಕ ರಾಜ್ಯ ವಿಶ್ರಾಂತ ನೌಕರರ ಸಾಂಸ್ಕೃತಿಕ ಕ್ರೀಡೆ ಮನೋರಂಜನಾ ಕೇಂದ್ರ ಬೆಂಗಳೂರು, ಹೊಳಲ್ಕೆರೆ ಶಾಖೆ ಹಾಗೂ ಮಾರುತಿ ನಿವೃತ್ತ ನೌಕರರ ಸಂಘದ ಸಹಯೋಗದೊಂದಿಗೆ ಮಲ್ಲಾಡಿಹಳ್ಳಿ ಸಮೀಪವಿರುವ ಕೆಂಗುಂಟೆ ಗ್ರಾಮದಲ್ಲಿ ಇತ್ತೀಚೆಗೆ ಹಮ್ಮಿಕೊಳ್ಳಲಾಗಿದ್ದ ಸನ್ಮಾನ ಸಮಾರಂಭದ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ಮೂಕ ಪ್ರಾಣಿಗಳಿಗೆ ಚಿಕಿತ್ಸೆ ನೀಡುವ ಪಶುವೈದ್ಯರ ಸೇವೆಯೂ ಅತ್ಯಂತ ಶ್ರೇಷ್ಟವಾದುದು. ಹಾಗಾಗಿ ವೈದ್ಯರುಗಳು ಸಮಯಪ್ರಜ್ಞೆ ಮತ್ತು ಕರ್ತವ್ಯ ನಿಷ್ಟೆಯನ್ನು ಅಳವಡಿಸಿಕೊಳ್ಳಬೇಕು. ಎಲ್.ಬಿ.ರಾಜಪ್ಪನವರು ಸಾಧಕರನ್ನು



ಗುರುತಿಸಿ ಸನ್ಮಾನಿಸುತ್ತಿರುವುದು ಬೇರೆಯವರಿಗೆ ಪ್ರೇರಣೆ ನೀಡಿದಂತಾಗಿದೆ ಎಂದು ಹೇಳಿದರು.

ಪಾಂಡೋಮಟ್ಟಿ ಕಮ್ಮತ್ತಳ್ಳಿ ವಿರಕ್ತ ಮಠದ ಡಾ.ಗುರುಬಸವಸ್ವಾಮಿಗಳು ಸಾನಿಧ್ಯ ವಹಿಸಿದ್ದರು.ಮಾರುತಿ ನಿವೃತ್ತ ನೌಕರರ ಸಂಘದ ಅಧ್ಯಕ್ಷ ಎನ್.ಸಿ.ರಾಜಣ್ಣ ಸನ್ಮಾನ ಸಮಾರಂಭದ ಅಧ್ಯಕ್ಷತೆ ವಹಿಸಿದ್ದರು.

ಮಾರುತಿ ನಿವೃತ್ತ ನೌಕರರ ಸಂಘದ ಸಂಸ್ಥಾಪಕ ಕೆಂಗುಂಟೆಯ ಡಿ.ಹೆಚ್.ಪರಮೇಶ್ವರಪ್ಪ, ಕರ್ನಾಟಕ ರಾಜ್ಯ ವಿಶ್ರಾಂತ ನೌಕರರ ಸಾಂಸ್ಕೃತಿಕ ಕ್ರೀಡೆ ಮನೋರಂಜನಾ ಕೇಂದ್ರದ ಅಧ್ಯಕ್ಷ ಎಲ್.ಬಿ.ರಾಜಪ್ಪ ಕೆಂಗುಂಟೆ ಇವರುಗಳು ವೇದಿಕೆಯಲ್ಲಿದ್ದರು.ವೈದ್ಯರುಗಳಾದ ಎಸ್.ಬಿ.ಲಕ್ಕೋಳ್, ಪ್ರಸಾದ ಎನ್.ಸಿ. ಅಶ್ವಿನಿ ಡಿ.ಹೆಚ್. ಕಿರಣ್ ಎಲ್.ಜೆ. ಶ್ರೀಪತಿ ಎನ್.ಇ. ಟಿ.ಎಸ್.ಲಕ್ಕೋಳ್, ಪವನ್ ಎಲ್.ಪಿ. ಪೂಜಾ ಎಲ್.ಪಿ.ಪಾವನ ಎನ್.ಎಸ್. ದಾಕ್ಷಾಯಿಣಿ ಡಿ.ಆರ್. ಎನ್.ಸಿ.ಪ್ರವೀಣ್, ರಶ್ಮಿ ಕೆ.ಜಿ. ಲೋಹಿತ್‌ಕುಮಾರ್ ಎಲ್.ಜೆ. ರಾಜು ಎಲ್.ಪಿ. ಶುಭ ಬಿ.ಎಸ್. ಹೇಮಂತ್ ಉಪಾಧ್ಯಾಯ ಎಸ್.ಇ. ಸಂದೇಶ್ ಕುಮಾರ್ ಲಕ್ಕೋಳ್, ಪಶು ವೈದ್ಯರುಗಳಾದ ಪ್ರಕಾಶ್ ಒ.ಎಸ್. ಸತೀಶ್ ಹೆಚ್.ಗಟ್ಟಿ, ಡಾಕ್ಟರೇಟ್ ಪದವೀಧರರುಗಳಾದ ರಾಜಪ್ಪ ಬಿ. ಪ್ರಭಾಕರ್ ಲಕ್ಕೋಳ, ರವಿ ಎಸ್.ಪಿ. ಎನ್.ಬಿ.ಗಟ್ಟಿ, ಕುಬೇರಪ್ಪ ಜಿ.ಸಿ. ಜ್ಞಾನೇಶ ಕೆ.ಎನ್. ಶಶಿಧರ ಟಿ.ಆರ್. ಮಂಜುನಾಥ ಎಲ್.ಎಂ. ಸವಿತ ಜಿ.ಲಕ್ಕೋಳ್ ಇವರುಗಳನ್ನು ಸನ್ಮಾನಿಸಲಾಯಿತು.

## ಫಾಸ್ಟ್ ನ್ಯೂಸ್

### ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

» ಚಿತ್ರದುರ್ಗ

2024-25ನೇ ಸಾಲಿಗೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಅಧೀನದ ಮೆಟ್ರಿಕ್ ನಂತರದ ಬಾಲಕ, ಬಾಲಕಿಯರ ವಿದ್ಯಾರ್ಥಿನಿಲಯ ಪ್ರವೇಶಾತಿಯನ್ನು 2025ರ ಜನವರಿ 10ರವರೆಗೆ ವಿಸ್ತರಿಸಲಾಗಿದೆ. ಪದವಿ ಮಟ್ಟದ ಕೋರ್ಸ್, ವೃತ್ತಿಪರ ಮತ್ತು ಸ್ನಾತಕೋತ್ತರಕೋರ್ಸಿನಸಾಮಾನ್ಯವಿದ್ಯಾರ್ಥಿಗಳು ಮಾತ್ರ ರಾಜ್ಯ ವಿದ್ಯಾರ್ಥಿನಿಲಯ ತಂತ್ರಾಂಶ https://shp.karnataka.gov.in ನಲ್ಲಿ ಅರ್ಜಿ ಸಲ್ಲಿಸಬಹುದು ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಡಿ. 29ಕ್ಕೆ ಮಾಸಿಕ ಗಮಕ ವಾಚನ ಕಾರ್ಯಕ್ರಮ

» ಚಿತ್ರದುರ್ಗ

ನಗರದ ಗಮಕಲಾಭಿಮಾನಿಗಳ ಸಂಘವು ನಡೆಸುತ್ತಿರುವ ಮಾಸಿಕ ಗಮಕ ವಾಚನ ವ್ಯಾಖ್ಯಾನ ಸಂಭ್ರಮದ 17ನೇ ಕಾರ್ಯಕ್ರಮವು ಇದೇ ತಿಂಗಳ 29ರ ಭಾನುವಾರ ಸಂಜೆ 6 ಗಂಟೆಗೆ ನಗರದ ಜೆ ಸಿ ಆರ್ ಬಡಾವಣೆಯ ಶ್ರೀ ಗಣಪತಿ ದೇವಾಲಯದ ಆವರಣದಲ್ಲಿ ನಡೆಯಲಿದೆ ಎಂದು ಸಂಘದ ಪ್ರಕಟಣೆ ತಿಳಿಸಿದೆ ಈ ಸಂದರ್ಭದಲ್ಲಿ ಕಲಾವಿದರಾದ ಮಲ್ಲಾಪುರ ಗೊಲ್ಲರಹಟ್ಟಿಯ ವೀರಣ್ಣ ವಾಚನ ಮಾಡಲಿದ್ದು ,ವ್ಯಾಖ್ಯಾನವನ್ನು ಚಿತ್ರದುರ್ಗ ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಕಾರ್ಯದರ್ಶಿ, ಹುರುಳಿ .ಎಂ .ಬಸವರಾಜ ನೆರವೇರಿಸಲಿದ್ದಾರೆ . ದೇವಿ ಪುರಾಣದ "ಚಂಡಮುಂಡ"ರ ಸಂಹಾರ ಎಂಬ ಪ್ರಸಂಗವನ್ನು ನಡೆಸಿಕೊಡಲಿದ್ದಾರೆ.ಮುಖ್ಯ ಅತಿಥಿಗಳಾಗಿ ಕರ್ನಾಟಕ ರತ್ನಶ್ರೀ ರಾಜ್ಯ ಪ್ರಶಸ್ತಿ ವಿಜೇತರಾದ ಚಿತ್ರದುರ್ಗದ ಶ್ರೀಮತಿ ಸತ್ಯಪ್ರಭಾ ವಸಂತಕುಮಾರ್ ಭಾಗವಹಿಸಲಿದ್ದಾರೆ. ಕಲಾಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಲೆ, ಕಲಾವಿದರನ್ನು ಪ್ರೋತ್ಸಾಹಿಸಿ ಯಶಸ್ವಿಗೊಳಿಸಬೇಕೆಂದು ಸಂಘಟಕರು ಪ್ರಕಟಣೆಯಲ್ಲಿ ಕೋರಿದ್ದಾರೆ.

### ವಿದ್ಯುತ್ ವ್ಯತ್ಯಯ

» ದಾವಣಗೆರೆ

ದಾವಣಗೆರೆ ತಾಲೂಕಿನಲ್ಲಿ ವಿವಿಧ ವಿದ್ಯುತ್ ಮಾರ್ಗಗಳಲ್ಲಿ ತುರ್ತು ಕಾಮಗಾರಿ ಕೈಗೊಳ್ಳುವುದರಿಂದ ಡಿ.28 ರಂದು ಬೆಳಿಗ್ಗೆ 10 ರಿಂದ ಸಂಜೆ 5 ಗಂಟೆಯವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ. ಮಾಮಾಸ್ ಜಾಯಿಂಟ್ ರಸ್ತೆ ಹಾಗೂ ಸುತ್ತಮುತ್ತಲಿನ ಪ್ರದೇಶಗಳು. ಶಾಮನೂರು ರಸ್ತೆ, ಎಸ್.ಎಸ್. ಲೇಔಟ್, ಎ ಬ್ಲಾಕ್, ಕುವೆಂಪು ನಗರ, ಬಾಟ್ಲಿ ಬಿಲ್ಡಿಂಗ್ ಸುತ್ತ ಮುತ್ತ, ಸಿದ್ದವೀರಪ್ಪ ಬಡಾವಣೆ, 1ನೇ ಅಡ್ಡ ರಸ್ತೆ ಯಿಂದ 7ನೇ ಅಡ್ಡರಸ್ತೆವರೆಗೆ, ಗ್ಲಾಸ್ ಹೌಸ್, ಬಾಪೂಜಿ ಬ್ಯಾಂಕ್ ಸಮುದಾಯ ಭವನದ ಹಿಂಭಾಗದ ಪ್ರದೇಶ , ಬಿ.ಐ.ಇ.ಟಿ. ಕಾಲೇಜು ಹಾಗೂ ಸುತ್ತಮುತ್ತಲಿನ ಪ್ರದೇಶಗಳು. ಬಿನ್ನಿ ಕಂಪನಿ ರಸ್ತೆ, ಎಮ್ ಜಿ ರಸ್ತೆ, ಎನ್ ಆರ್ ರಸ್ತೆ, ಬೆಲ್ಲೂಡಿಹಲ್ಲಿ, ಮಹಾವೀರ ರಸ್ತೆ ಹಾಗೂ ಸುತ್ತ ಮುತ್ತಲಿನ ಪ್ರದೇಶಗಳು. ಮಂಡಕ್ಕಿ ಬಟ್ಟಿ, 1 ರಿಂದ 10 ನೇ ಕ್ರಾಸ್, ಇಂದಿರಾ ನಗರ, ಸಿದ್ದರಾಮೇಶ್ವರ ಬಡಾವಣೆ, ಕಾರ್ಲ್‌ಮಾರ್ಸ್ ನಗರ, ಕೋಳಿ ಚನ್ನಪ್ಪ ಬಡಾವಣೆ ಮತ್ತು ಸುತ್ತಮುತ್ತಲಿನ ಪ್ರದೇಶಗಳು. ಹೆಚ್.ಕೆ.ಆರ್. ಸರ್ಕಲ್, ಕೆ.ಇ.ಬಿ ಕಾಲೋನಿ, ನಿಟುವಳ್ಳಿ ಹಾಗು ನಿಟುವಳ್ಳಿ ಹೊಸ ಬಡಾವಣೆ, ಮೌನೇಶ್ವರ ಬಡಾವಣೆ, ಸೈಯದ್‌ಪೀರ್ ಬಡಾವಣೆ, ಐ.ಟಿ.ಐ. ರಿಂಗ್ ರಸ್ತೆ, ಜಯನಗರ, ದುರ್ಗಾಂಬಿಕ ದೇವಸ್ಥಾನ ಸುತ್ತಮುತ್ತ, ಎಸ್.ಎಸ್. ಹೈಟೆಕ್ ಆಸ್ಪತ್ರೆ ರಸ್ತೆ, ಭಗೀರಥ ಸರ್ಕಲ್, ಕಾಳಿಕಾಂಬ ದೇವಸ್ಥಾನ, ಶಕ್ತಿನಗರ, ಹಾಗೂ ಇ.ಎಸ್.ಐ ಆಸ್ಪತ್ರೆ ಮತ್ತು ಸುತ್ತಮುತ್ತಲಿನ ಪ್ರದೇಶಗಳು, ಪಿ.ಬಿ. ರಸ್ತೆ., ಹಾಗೂ ಸುತ್ತಮುತ್ತಲಿನ ಪ್ರದೇಶಗಳು. ಶ್ರೀ ಮುರಘ ರಾಜೇಂದ್ರ ಸ್ವಾಮಿಗಳ ಮಠ, ಜಾಧವ್ ಕ್ಲಿನಿಕ್ ಸುತ್ತಮುತ್ತ , ಶಿವಪ್ಪ ವೃತ್ತದಿಂದ ಜಯದೇವ ವೃತ್ತದವರೆಗೆ ಹಾಗೂ ಸುತ್ತಮುತ್ತಲಿನ ಪ್ರದೇಶಗಳು. ಪೊಲೀಸ್ ಕ್ವಾಟ್ರಸ್, ತುಂಗ, ಭದ್ರ, ಸರಸ್ವತಿ, ಕೃಷ್ಣ ಬ್ಲಾಕ್, ಅರುಣಾ ಸರ್ಕಲ್ ಮತ್ತು ಸುತ್ತಮುತ್ತಲಿನ ಪ್ರದೇಶಗಳು. ಎಂ.ಸಿ.ಸಿ. ಎ ಬ್ಲಾಕ್, ನ್ಯಾಯಾಧೀಶರ ವಸತಿ ಗೃಹಗಳು, ತೊಗಟವೀರ ಕಲ್ಯಾಣ ಮಂಟಪ, ವಿನೋಬ ನಗರ 1ನೇ ಮುಖ್ಯ ರಸ್ತೆ ಹಾಗೂ ಸುತ್ತ ಮುತ್ತಲಿನ ಪ್ರದೇಶಗಳು. ಎಸ್.ಎಸ್. ಬಡಾವಣೆ ಎ ಬ್ಲಾಕ್, ಹನುಮನಹಳ್ಳಿ, ಕೊಗ್ಗನೂರು, ಹನುಮನಹಳ್ಳಿ, ಆನಗೋಡು, ಹೆಬ್ಬಾಳು, ನೀರ್ಥಡಿ, ಶಿವಪುರ, ಹಾಲುವರ್ತಿ, ಗಂಗನಕಟ್ಟೆ, ನೇರ್ಲಿಗಿ, ಚಿನ್ನಸಮುದ್ರ ಗ್ರಾಮಗಳು ಹಾಗೂ ಸುತ್ತಮುತ್ತಲಿನ ಗ್ರಾಮಗಳು ಮತ್ತು ಆರಾಧ್ಯಾ ಕೈಗಾರಿಕೆ ಅರುಣಾ ಸರ್ಕಲ್ ಮತ್ತು ಸುತ್ತಮುತ್ತಲಿನ ಪ್ರದೇಶಗಳು. ಎಂ.ಸಿ.ಸಿ. ಎ ಬ್ಲಾಕ್, ನ್ಯಾಯಾಧೀಶರ ವಸತಿ ಗೃಹಗಳು, ತೊಗಟವೀರ ಕಲ್ಯಾಣ ಮಂದಿರ, ವಿನೋಬ ನಗರ 1ನೇ ಮುಖ್ಯ ರಸ್ತೆ ಹಾಗೂ ಸುತ್ತ ಮುತ್ತಲಿನ ಪ್ರದೇಶಗಳು.: ಎಸ್.ಎಸ್. ಬಡಾವಣೆ, ಎ ಬ್ಲಾಕ್, ಶಾಂತಿನಗರ, ಕುಂದುವಾಡ ರಸ್ತೆ, ಮಹಾನಗರ ಪಾಲಿಕೆ ಕುಡಿಯುವ ನೀರಿನ ಸ್ಥಾವರ, ಬಸವೇಶ್ವರ ಬಡಾವಣೆ, ಮಹಾಲಕ್ಷ್ಮೀ ಬಡಾವಣೆ, ಬಾಲಾಜಿ ನಗರ, ಕುಂದುವಾಡ ಕೆರೆ ಹಾಗೂ ಸುತ್ತಮುತ್ತಲಿನ ಪ್ರದೇಶಗಳು. ಪಿ.ಬಿ ರೋಡ್, ರಿಲಯನ್ಸ್ ಮಾರ್ಕೆಟ್, ಸುಲ್ತಾನ್ ಡೈಮೈಂಡ್ಸ್, ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣ ಹಾಗೂ ಸುತ್ತಮುತ್ತಲಿನ ಪ್ರದೇಶಗಳು. ನಿಟುವಳ್ಳಿ ಹಾಗೂ ನಿಟುವಳ್ಳಿ ಹೊಸ ಬಡಾವಣೆ, ದುರ್ಗಾಂಬಿಕ ದೇವಸ್ಥಾನ ಸುತ್ತಮುತ್ತ, 60 ಅಡಿ ರಸ್ತೆ ಮತ್ತು ಸುತ್ತಮುತ್ತಲಿನ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಬೆಸ್ಕಾಂ ತಿಳಿಸಿದೆ.

# ಮರ ಬೆಳೆಸದಿದ್ದರೆ ಮನುಕುಲಕ್ಕೆ ಆಪತ್ತು

» ದಾವಣಗೆರೆ

ಮರವೊಂದು ಜೀವಿತಾವಧಿಯಲ್ಲಿ ಒಂದು ಅಂದಾಜಿನ ಪ್ರಕಾರ ಸುಮಾರು 15 ಲಕ್ಷ ರೂ. ಮೌಲ್ಯದ ಸಾರ್ವಜನಿಕ ಸೇವೆ ಸಲ್ಲಿಸುತ್ತದೆ. ಇಂಥ ಗಿಡ ಮರ ಬೆಳೆಸದಿದ್ದರೆ ಮನುಷ್ಯ ಕುಲಕ್ಕೆ ಆಪತ್ತು ಎಂದು ಸಾಣೆಹಳ್ಳಿ ಶ್ರೀ ತರಳಬಾಳು ಜಗದ್ಗುರು ಶಾಖಾ ಮಠದ ಪಟ್ಟಾಧ್ಯಕ್ಷರಾದ ಶ್ರೀ ಪಂಡಿತಾರಾಧ್ಯ ಸ್ವಾಮೀಜಿ ಎಚ್ಚರಿಸಿದ್ದಾರೆ.

ತಾಲ್ಲೂಕಿನ ಕಬ್ಬೂರು ಗ್ರಾಮದಲ್ಲಿ ಲಿಂ. ಕೆ.ವಿ. ಗಂಗಾಧರಪ್ಪ ಅವರ ಸ್ಮರಣೆಗಾಗಿ ಆಯೋಜಿಸಿದ್ದ ಕೃಷಿ ಉತ್ಸವ ಹಾಗೂ ಕಾಯಕ ಜೀವಿ ಸ್ಮರಣೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಮರಗಿಡಗಳು ಅಶುದ್ಧ ಗಾಳಿ ಹೀರಿಕೊಂಡು ಶುದ್ಧ ಗಾಳಿ ನೀಡುತ್ತವೆ. ಶುದ್ಧ ಗಾಳಿ ಹೀರಿಕೊಂಡು ಅಶುದ್ಧ ಗಾಳಿ ಬಿಡುವ ಮನುಷ್ಯರು ಮರಗಿಡ ಬೆಳೆಸಲು ಆಸಕ್ತಿ ತೋರಿಸುತ್ತಿಲ್ಲ. ಇಂಥ ಮನೋಭಾವ ಮುಂದುವರೆದರೆ ಕೆಲವೇ ವರ್ಷಗಳಲ್ಲಿ ಮನುಷ್ಯ ಆಮ್ಲಜನಕ ಸಿಲಿಂಡರ್ ಬೆನ್ನ ಮೇಲೆ ಹೊತ್ತು ಬದುಕಬೇಕಾದ ದುಸ್ಥಿತಿ ಬರಬಹುದು ಎಂದು ಆತಂಕ ವ್ಯಕ್ತಪಡಿಸಿದರು.

ಇದೇ ಕಾರ್ಯಕ್ರಮದಲ್ಲಿ ಹಸಿರೆಲೆಯ ಉಸಿರು ಗಂಗಣ್ಣ ಕೃತಿ ಬಿಡುಗಡೆ ಮಾಡಿದ ಸ್ವಾಮೀಜಿ, ನೂರಾರು ಸಾಲು ಮರ ಬೆಳೆಸಿದ್ದ ಲಿಂ. ಕೆ.ವಿ. ಗಂಗಾಧರಪ್ಪ ಅವರು ಇಂದು ಮಾದರಿಯಾಗಿದಾರೆ. ಮುಂದೊಂದು ದಿನ ಆಮ್ಲಜನಕ ಕೊರತೆಯಿಂದ ಮನುಷ್ಯ ಮತ್ತು ಜೀವಿಗಳಿಗೆ ತೊಂದರೆ ಆಗಬಾರದೆಂಬ ದೂರ ದೃಷ್ಟಿ ಗಂಗಣ್ಣ ಅವರಲ್ಲಿ ಕಾಣುತ್ತದೆ ಎಂದು ಪ್ರಶಂಸಿಸಿದರು.ಮನುಷ್ಯ ನೆಮ್ಮದಿ ಜೀವನ ನಡೆಸಬೇಕಾದರೆ ಮೊದಲು ಮೂಢನಂಬಿಕೆ ಕಂದಾಚಾರಗಳಿಂದ ದೂರ ಇರಬೇಕು. ಇಂಥ ಆಚರಣೆಗಳಿಂದ ದೂರ ಇದ್ದ ಕಬ್ಬೂರಿನ ಗಂಗಣ್ಣ ತನ್ನ ಕುಟುಂಬ ಅಲ್ಲದೆ ಅನೇಕ ಜನರ ವೈಚಾರಿಕ ಪ್ರಜ್ಞೆ ಬೆಳೆಸಲು ಕಾರಣವಾಗಿದ್ದರು ಎಂದರು.



### ಇದು ಕಾಂಗ್ರೆಸ್ ಮನೆತನ

ಹಿಂದೆ ಹೊನ್ನಾಯಕನಹಳ್ಳಿ ಮನೆ ಎಂದರೇ ಕಾಂಗ್ರೆಸ್ ನವರು ಎಂದಿತ್ತು. ಮಲ್ಲಿಕಾರ್ಜುನ ಕಬ್ಬೂರು ನನ್ನ ಬಳಿ ಬಂದು ತಮ್ಮ ಪತ್ನಿಗೆ ಟಿಕೇಟ್ ಕೇಳಿದಾಗ ಆಶ್ಚರ್ಯವಾಯಿತು. ಆದರೆ ಪ್ರತಿಭಾ ಗೆದ್ದು ತಾಲ್ಲೂಕು ಪಂಚಾಯಿತಿ ಅಧ್ಯಕ್ಷೆಯಾಗಿ ಉತ್ತಮ ಕೆಲಸ ಮಾಡಿದರು. ಇವರು ಬಂದು ಮೇಲೆ ಇಲ್ಲಿ ಬಿಜೆಪಿ ಎತ್ತರಕ್ಕೆ ಹೋಯಿತು ಎಂದರೆ ತಪ್ಪಾಗಲಾರದು ಎಂದು ಶ್ಲಾಘಿಸಿದರು.

### 42 ಯುವಕರ ರಕ್ತದಾನ

ಲಿಂ. ಕೆ.ವಿ. ಗಂಗಾಧರಪ್ಪ ಅವರ ಸ್ಮರಣೆ ಅಂಗವಾಗಿ ಆಯೋಜಿಸಿದ್ದ ರಕ್ತದಾನ ಶಿಬಿರದಲ್ಲಿ ಕಬ್ಬೂರು ಹಾಗೂ ಸುತ್ತಮುತ್ತಲ ಗ್ರಾಮದ 42 ಯುವಕರು ರಕ್ತದಾನ ಮಾಡಿದರು. ದಾವಣಗೆರೆ ಸಿ.ಜಿ. ಆಸ್ಪತ್ರೆ ರಕ್ತ ಭಂಡರಾ ವಿಭಾಗದ ಸಿಬ್ಬಂದಿ ರಕ್ತ ಸಂಗ್ರಹ ಮಾಡಿದರು. ಕೊಡಗನೂರು ಪ್ರಾಥಮಿಕ ಆರೋಗ್ಯ ಕೇಂದ್ರದ ಡಾ. ಮಂಜುನಾಥ್ ಅವರು ಆರೋಗ್ಯ ತಪಾಸಣೆ ಮಾಡಿದರು. ಎಸ್.ಎಸ್. ಕೇರ್ ಟ್ರಸ್ಟ್ ವೈದ್ಯರು ಸಹ ಆರೋಗ್ಯ ತಪಾಸಣೆ ಮಾಡಿದರು. ಪುಣ್ಯಕೋಟಿ ನೃತ್ಯರೂಪಕ: ಕೃಷಿ ಉತ್ಸವದ ಅಂಗವಾಗಿ ಕಬ್ಬೂರು ಪ್ರೌಢಶಾಲೆ ಮಕ್ಕಳಿಂದ ನಡೆದ ಪುಣ್ಯಕೋಟಿ ಗೋವಿನ ಹಾಡಿನ ನೃತ್ಯ ರೂಪಕ ನೋಡುಗರ ಮೆಚ್ಚುಗೆಗೆ ಪಾತ್ರವಾಯಿತು.

ಮಾಜಿ ಸಚಿವ ಎಸ್.ಎ. ರವೀಂದ್ರನಾಥ್ ಮಾತನಾಡಿ, ಕೃಷಿಯ ಜೊತೆ ಪರಿಸರ ಪ್ರೀತಿ ಬೆಳೆಸಿಕೊಳ್ಳುವುದು ಅಪರೂಪದ ಸಂಗತಿ. ಕೃಷಿಯೇ ಇವತ್ತು ಹಲವರಿಗೆ ಕಷ್ಟಕರವಾಗಿದೆ. ಇಂಥದ್ದರಲ್ಲಿ ಗಂಗಣ್ಣ ಅವರು ಸಸಿ ನೆಟ್ಟು ನೀರು ಹಾಕಿ ಜೋಪಾನ ಮಾಡಿರುವುದು ಶ್ಲಾಘನೀಯ. ಗಂಗಣ್ಣ ಅವರ ಪರಿಶ್ರಮದಿಂದ ನೂರಾರು ಮರಗಳು ಇಲ್ಲಿ ಬೆಳೆದು ಪರಿಸರ ಪಾಠ ಮಾಡುತ್ತಿವೆ ಎಂದು ಹೇಳಿದರು.

ರೈತರು ಅಡಿಕೆ ಜೊತೆ ಹಲಸು, ಮಾವು ಬೆಳೆದರೆ ನಿರಂತರವಾಗಿ ಆದಾಯ ಪಡೆಯಬಹುದು ಎಂದು ಸಲಹೆ ಮಾಡಿದರು. ರಾಷ್ಟ್ರೀಯ ತೋಟಗಾರಿಕೆ ಪ್ರಶಸ್ತಿ ಪುರಸ್ಕೃತ ಹದ್ದೆ ಗ್ರಾಮದ ಎಚ್.ಬಿ. ಮುರುಗೇಂದ್ರಪ್ಪ ಮಾತನಾಡಿ, ಅಪರೂಪದ ಬೆಳೆಗಳನ್ನು ತೋಟಗಾರಿಕೆಯಲ್ಲಿ ಅಂತರ್ ಬೆಳೆಯಾಗಿ ಬೆಳೆದರೆ ಉತ್ತಮ ಲಾಭ ಕಾಣಬಹುದು. ರೈತರು ಬುದ್ಧಿವಂತರಾಗಿ ತೋಟಗಾರಿಕೆ ಮಾಡಿದರೆ ಯಾವುದೇ ಸಾಲ ಇಲ್ಲದ ಉತ್ತಮ ಜೀವನ ನಡೆಸಬಹುದು ಎಂದರು.

ದಾವಣಗೆರೆ ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕ ಶ್ರೀಧರ್‌ಮೂರ್ತಿ ಡಿ.ಎಂ. ಮಾತನಾಡಿ, ಕ್ರಿಮಿನಾಶಕ ಹಾಗೂ ರಾಸಾಯನಿಕ ಗೊಬ್ಬರ ಬಳಕೆಯಿಂದ ಮನುಷ್ಯ ಅನೇಕ ರೋಗಗಳಿಂದ ನರಳುತ್ತಿದ್ದಾನೆ. ಮಂಡಿ ಮತ್ತು ಬೆನ್ನು ನೋವು ಈಗ ಸಾಮಾನ್ಯವಾಗಿದೆ. ಬಿ.ಪಿ. ಶುಗರ್ ಕಾಯಿಲೆ ಇಲ್ಲದ ಕುಟುಂಬಗಳೇ ಇಲ್ಲ ಎನ್ನುವಂತಾಗಿದೆ. ಇದಕ್ಕೆಲ್ಲಾ ಕಾರಣ ಸಂಪ್ರದಾಯಿಕ ಸಿರಿಧಾನ್ಯ ಬಿಟ್ಟು ಹೈಬ್ರಿಡ್ ಧಾನ್ಯಗಳ ಮೊರೆ ಹೋಗಿರುವುದು ಕಾರಣ. ಇನ್ನು ಮುಂದೆ ನೈಜ ಕೃಷಿಗೆ ಹೆಚ್ಚು ಬೆಲೆ ಬರಲಿದೆ ಎಂದರು.

ಆನಗೋಡು ರೈತ ಹುತಾತ್ಮ ಸಮಿತಿ ಅಧ್ಯಕ್ಷ ಎನ್.ಜಿ. ಪುಟ್ಟಸ್ವಾಮಿ ಮಾತನಾಡಿ, ರೈತ ಕೂಡ ಪರಿಸರ ಪ್ರಜ್ಞೆ ರೂಢಿಸಿಕೊಂಡು ಸಾಲು ಮರ ಬೆಳೆಸಿರುವುದು ಅಪರೂಪದ ಸಂಗತಿ. ಇಂಥ ಪ್ರವೃತ್ತಿಗಳನ್ನು ಯುವಜನ ಬೆಳೆಸಿಕೊಳ್ಳಬೇಕು. ಕೃಷಿಯಲ್ಲಿ ಕೂಲಿ ಆಳು ಸಿಗದ ಪರಿಸ್ಥಿತಿ ನಿರ್ಮಾಣವಾಗಿದೆ. ಆಧುನಿಕ ತಂತ್ರಜ್ಞಾನ ಇದಕ್ಕೆ ನೆರವಾಗಬೇಕಿದೆ ಎಂದರು.ನಿವೃತ್ತ ಮುಖ್ಯ ಶಿಕ್ಷಕ ಎ.ಕೆ. ಮಲ್ಲೇಶಪ್ಪ, ಕರ್ನಾಟಕ ರಾಜ್ಯ ಸರ್ಕಾರಿಕ ನೌಕರರ ಸಂಘದ ಜಿಲ್ಲಾ ಕಾರ್ಯದರ್ಶಿ ಪಿ. ಪಾಲಾಕ್ಷಿ, ಮಾಜಿ ಸೈನಿಕರಾದ ಪ್ರಭು ಎಚ್.ಬಿ., ಎಂ. ಸಿದ್ದಪ್ಪ, ಡಿ.ಎಚ್. ಮಹಾದೇವಪ್ಪ, ಬಿ.ಬಿ. ರಾಜಪ್ಪ, ಆಶಾ ಕಾರ್ಯಕರ್ತೆಯರಾದ ಎಂ.ಕೆ.ತಿಪ್ಪಮ್ಮ, ಆರ್.ಎನ್. ಶಶಿಕಲಾ ಅವಬರನ್ನು ಸನ್ಮಾನಿಸಲಾಯಿತು.ರೈತ ಸಂಘದ ಮುಖಂಡರಾದ ಹೊನ್ನೂರು ಮುನಿಯಪ್ಪ, ಆವರಗೆರೆ ರುದ್ರಮುನಿ ಉಪಸ್ಥಿತರಿದ್ದರು.ಹಿರಿಯ ಪತ್ರಕರ್ತ ಮಲ್ಲಿಕಾರ್ಜುನ್ ಕಬ್ಬೂರು ಪ್ರಸ್ತಾವಿಕವಾಗಿ ಮಾತನಾಡಿದರು. ಡಾ. ಆಶಾ ನಾಗರಾಜ್ ಕಬ್ಬೂರು ನಿರೂಪಿಸಿ, ಭೂಮೇಶ್ ಕಬ್ಬೂರು ವಂದಿಸಿದರು.

# ನೆಹರೂ ಸರ್ಕಲ್ ಸುತ್ತಮುತ್ತ ಅಡ್ಡಾದಿಡ್ಡಿ ವಾಹನ ನಿಲ್ಲಿಸಿದರೆ ಯದ್ವಾತದ್ವಾ ದಂಡ: ಪೊಲೀಸರ ಎಚ್ಚರಿಕೆ

» ಚಳ್ಳಕೆರೆ

ನೆಹರೂ ಸರ್ಕಲ್ ಸುತ್ತಮುತ್ತ ಅಡ್ಡಾದಿಡ್ಡಿ ವಾಹನ ನಿಲ್ಲಿಸಿದರೆ ಯದ್ವಾತದ್ವಾ ದಂಡ ಕಟ್ಟಬೇಕಾಗುತ್ತದೆ ಎಂದು ಇನ್ಸ್‌ಪೆಕ್ಟರ್ ರಾಜಫಕೃದ್ದೀನ್ ದೇಸಾಯಿ ನೆಹರೂ ಸರ್ಕಲ್‌ನಲ್ಲಿ ವಾಹನ ನಿಲ್ಲಿಸುವವರಿಗೆ ಎಚ್ಚರಿಕೆ ನೀಡಿದ್ದಾರೆ.

ಇತ್ತೀಚಿನ ದಿನಗಳಲ್ಲಿ ಚಳ್ಳಕೆರೆ ನಗರದ ಮಧ್ಯಭಾಗದಲ್ಲಿ ಹಾದುಹೋಗಿರುವ ಎರಡೂ ರಾಷ್ಟ್ರೀಯ ಹೆದ್ದಾರಿಗಳು ದಿನನಿತ್ಯ ಅಧಿಕ ಸಂಖ್ಯೆಯ ವಾಹನ ಸಂಚಾರ ಹಾಗೂ ಜನಸಂದಣಿಯಿಂದ ತುಂಬಿರುತ್ತದೆ. ವಿಶೇಷವಾಗಿ ಬಳ್ಳಾರಿ, ಪಾವಗಡ ರಸ್ತೆಯಲ್ಲಿ ಸಂಚಾರ ಮಾಡುವುದೇ ಕಷ್ಟವಾಗಿರುವಾಗ ನೆಹರೂ ವೃತ್ತದ ಸುತ್ತಲೂ ಎಲ್ಲಂದರಲ್ಲಿ ದ್ವಿಚಕ್ರ ಹಾಗೂ ಕಾರುಗಳು ನಿಲುಗಡೆಯಾವುದರಿಂದ ಸಾರ್ವಜನಿಕರು, ವಾಹನ ಸವಾರರು ತೊಂದರೆಗೀಡಾಗಿದ್ದಾರೆ. ಈ ಹಿನ್ನೆಲೆಯಲ್ಲಿ ಅನೇಕ ಬಾರಿ ಪೊಲೀಸ್ ಇಲಾಖೆ ಸಮಸ್ಯೆಗಳ ಬಗ್ಗೆ ಪತ್ರಿಕೆ ಮೂಲಕ ಮಾಹಿತಿ ನೀಡಲಾಗಿತ್ತು.

ನಗರದ ನಾಗರೀಕರೂ ಹಾಗೂ ವಾಹನ ಸವಾರರು ಪ್ರತಿನಿತ್ಯ ಎದುರಿಸುತ್ತಿರುವ ತೊಂದರೆಗಳ ಬಗ್ಗೆ ಮಾಹಿತಿ ಪಡೆದ ಪೊಲೀಸ್ ಇಲಾಖೆ, ಜಿಲ್ಲಾ ರಕ್ಷಣಾಧಿಕಾರಿ ರಂಜಿತ್‌ಕುಮಾರ್ ಬಂಡಾರು, ಹೆಚ್ಚುವರಿ ರಕ್ಷಣಾಧಿಕಾರಿ ಕುಮಾರಸ್ವಾಮಿ, ಡಿವೈಎಸ್ಪಿ ಟಿ.ಬಿ.ರಾಜಣ್ಣ ಮಾರ್ಗದರ್ಶನದಲ್ಲಿ ಠಾಣಾ ಇನ್ಸ್‌ಪೆಕ್ಟರ್ ರಾಜಫಕೃದ್ದೀನ್ ದೇಸಾಯಿ



ಹಾಗೂ ಸಿಬ್ಬಂದಿ ವರ್ಗ ಎಲ್ಲಂದರಲ್ಲಿ ವಾಹನ ನಿಲುಗಡೆಯನ್ನು ನಿಯಂತ್ರಿಸಲು ರಸ್ತೆಗೆ ಅಡ್ಡಲಾಗಿ ನಿಲ್ಲಿಸಿದ ವಾಹನಗಳಿಗೆ ಲಾಕ್ ಮಾಡಿ ಅಧಿಕ ದಂಡವನ್ನು ವಿಧಿಸುವ ಕಾರ್ಯವನ್ನು ಕಳೆದ ಎರಡು ದಿನಗಳಿಂದ ಕೈಗೊಂಡಿದ್ದಾರೆ. ವಿಶೇಷವಾಗಿ ಪ್ರತಿನಿತ್ಯ ನೆಹರೂ ವೃತ್ತ ಸೇರಿದಂತೆ ನಾಲ್ಕು ರಸ್ತೆಗಳಲ್ಲಿ ಪೊಲೀಸರು ರಸ್ತೆಗೆ ಅಡ್ಡಲಾಗಿ ನಿಂತ ವಾಹನಗಳ ಮೇಲೆ ಕ್ರಮ ಕೈಗೊಳ್ಳಲಾರಂಭಿಸಿದ್ದಾರೆ.

ಠಾಣಾ ಇನ್ಸ್‌ಪೆಕ್ಟರ್ ರಾಜಫಕೃದ್ದೀನ್ ದೇಸಾಯಿ ಈ ಬಗ್ಗೆ ಮಾತನಾಡಿ, ಸಾರ್ವಜನಿಕರ ಅನುಕೂಲಕ್ಕಾಗಿ ಪೊಲೀಸ್ ಇಲಾಖೆ ನೆಹರೂ ವೃತ್ತದಲ್ಲಿ ಎಲ್ಲಂದರಲ್ಲಿ ನಿಲುಗಡೆ ಮಾಡುವ ವಾಹನ ಸವಾರರಿಗೆ ಶಾಕ್ ಮುಟ್ಟಿಸುವ ಕೆಲಸ ಮಾಡಲಾಗುತ್ತಿದೆ. ಮೊದಲ ಹಂತದಲ್ಲಿ ಕೇವಲ ವಾಹನ ಒಂದಕ್ಕೆ 500ರೂ ದಂಡ ವಿಧಿಸಿ ಎಚ್ಚರಿಕೆ ನೀಡಲಾಗುವುದು. ತದನಂತರ ಅದೇ ವಾಹನ ಸಿಕ್ಕರೆ ಅಧಿಕ ದಂಡ ವಿಧಿಸಲಾಗುವುದು. ದಯಮಾಡಿ ವಾಹನ ಸವಾರರು ತಮ್ಮ ವಾಹನಗಳನ್ನು ಸಾರ್ವಜನಿಕರ ರಸ್ತೆಯಿಂದ ದೂರದಲ್ಲಿ ನಿಲುಗಡೆ ಮಾಡುವಂತೆ ಮನವಿ ಮಾಡಿದ್ದಾರೆ. ಅನಗತ್ಯವಾಗಿ ಪೊಲೀಸ್ ಇಲಾಖೆಗೆ ದಂಡ ಪಾವತಿಸದಂತೆ ಎಚ್ಚರಿಕೆ ವಹಿಸಬೇಕಾದರೆ ತಮ್ಮ ವಾಹನಗಳನ್ನು ಈಗಾಗಲೇ ಗುರುತು ಮಾಡಿದ ಪಾರ್ಕಿಂಗ್ ಜಾಗದಲ್ಲಿ ನಿಲುಗಡೆ ಮಾಡುವಂತೆ ತಿಳಿಸಿದ್ದಾರೆ.

ಸಬ್‌ಇನ್ಸ್‌ಪೆಕ್ಟರ್ ಧರೆಪ್ಪಬಾಳಪ್ಪದೊಡ್ಡಮನಿ, ಎಎಸ್‌ಐ ಮಂಜುನಾಥ, ಶಿವಣ್ಣ, ನಾಗೇಂದ್ರಪ್ಪ, ಪೇದೆಗಳಾದ ತಿಲಕ್, ಶಂಕರ, ಪರಶುರಾಮ, ರಂಗಸ್ವಾಮಿ ಮುಂತಾದವರು ಇದ್ದರು.

## ಆರ್ಥಿಕತೆಗೆ ಬಲವಾದ ಶಕ್ತಿ ತುಂಬಿದ ಕೀರ್ತಿ ಮನಮೋಹನ ಸಿಂಗರದ್ದು



» ಚಳ್ಳಕೆರೆ

ರಾಷ್ಟ್ರದ ಪ್ರಧಾನಮಂತ್ರಿಯಾಗಿ ಸುಧೀರ್ಘಕಾಲ ಆಡಳಿತ ನಡೆಸಿ ಬಡತನ ನಿರ್ಮೂಲನೆಗೆ ಪ್ರಾಮಾಣಿಕ ಯತ್ನ ನಡೆಸಿದ ದಿವಂಗತ ಪ್ರಧಾನಮಂತ್ರಿ ಇಂದಿರಾಗಾಂಧಿ ನಂತರ ದೇಶದ ಆರ್ಥಿಕತೆಗೆ ಶಕ್ತಿತುಂಬಿದ ಕೀರ್ತಿ ದಿವಂಗತ ಮಾಜಿ ಪ್ರಧಾನಮಂತ್ರಿ ಮನಮೋಹನಸಿಂಗ್‌ರವರದ್ದು ಎಂದು ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡ ಟಿ.ಪ್ರಭುದೇವ ತಿಳಿಸಿದರು. ಅವರು, ನಗರದ ಶಾಸಕ ಭವನದಲ್ಲಿ ಚಳ್ಳಕೆರೆ ಮತ್ತು ಪರಶುರಾಮಪುರ ಬ್ಲಾಕ್ ಕಾಂಗ್ರೆಸ್ ಘಟಕ ಹಮ್ಮಿಕೊಂಡಿದ್ದ ಶ್ರದ್ಧಾಂಜಲಿ ಸಭೆಯಲ್ಲಿ ಭಾಗವಹಿಸಿ ಮಾತನಾಡಿದರು. ಪ್ರಸ್ತುತ ರಾಜಕೀಯ ಪರಿಸ್ಥಿತಿಯಲ್ಲಿ ಅಧಿಕಾರ ಪಡೆಯಲು ಕಿತ್ತಾಟನಡೆಸುವ ಸಂದರ್ಭದಲ್ಲಿ ಮೌನವಾಗಿ ಸಭೆಯಲ್ಲಿ ಭಾಗವಹಿಸಿದ್ದ ಮನಮೋಹನಸಿಂಗ್‌ರವರಿಗೆ ದೇಶದ ಪ್ರಧಾನಿಪಟ್ಟವನ್ನು ಕಾಂಗ್ರೆಸ್ ಪಕ್ಷ ನೀಡಿತ್ತು. ಮನಮೋಹನಸಿಂಗ್‌ರವರು ದೇಶದ ಸರ್ವತೋಮುಖ ಅಭಿವೃದ್ದಿಗೆ ಪ್ರಾಮಾಣಿಕ ಪ್ರಯತ್ನ ನಡೆಸಿದ ಧೀಮಂತ ವ್ಯಕ್ತಿ ಎಂದರು.

ಪ್ರಧಾನ ಕಾರ್ಯದರ್ಶಿ ಪಿ.ತಿಪ್ಪೇಸ್ವಾಮಿ ಮಾತನಾಡಿ, ಸರಳತೆಗೆ ಮತ್ತೊಂದು ಹೆಸರೇ ಮನಮೋಹನಸಿಂಗ್. ಪ್ರಧಾನಮಂತ್ರಿಯಾಗಿಯೂ ಸಹ ಅವರು ಸರಳವಾಗಿಯೇ ಜೀವನ ನಡೆಸಿದರು. ಪ್ರತಿಯೊಂದು ಹಂತದಲ್ಲೂ ಸರಳತೆಯ ಮೂಲಕವೇ ಎಲ್ಲರ ಗಮನಸೆಳದಿದ್ದರು. ಆಧಾರಕಾರ್ಡ್, ಉಚಿತ ಪಡಿತರ ವಿತರಣೆ ಸೇರಿದಂತೆ ಹಲವಾರು ಜನಪರ ಯೋಜನೆಗಳನ್ನು ಜಾರಿಗೆ ತಂದ ಕೀರ್ತಿ ಅವರದ್ದು ಎಂದರು.

## ಪ್ರಮುಖ ಸುದ್ದಿ

# ಧರ್ಮ ದೀಪದ ಬೆಳಕಿನಿಂದ ಅಜ್ಞಾನ ದೂರ: ರಂಭಾಪುರಿ ಶ್ರೀ

» ತುಮಕೂರು

ಆಧುನಿಕ ಕಾಲದಲ್ಲಿ ಮನುಷ್ಯ ಯಂತ್ರದಂತೆ ಕೆಲಸ ಮಾಡಿದರೂ ಬದುಕಿನಲ್ಲಿ ಶಾಂತಿ ನೆಮ್ಮದಿಯಿಲ್ಲ. ಬಾಳಿನ ಭಾಗ್ಯೋದಯಕ್ಕೆ ಆಧ್ಯಾತ್ಮಿಕ ಚಿಂತನಗಳು ಅವಶ್ಯಕ. ಧರ್ಮ ದೀಪದ ಬೆಳಕಿನಿಂದ ಮನುಷ್ಯನ ಅಜ್ಞಾನ ದೂರವಾಗುತ್ತದೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶುಕ್ರವಾರ ಶ್ರೀ ವಿಶಾಲಾಕ್ಷಮ್ಮ ಸದಾಶಿವಯ್ಯ ಸಭಾಭವನದಲ್ಲಿ ಶ್ರೀ ಜಗದ್ಗುರು ಪಂಚಾಚಾರ್ಯ ಸೇವಾ ಟ್ರಸ್ಟಿನ ಆಶ್ರಯದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳ ಧನುರ್ಮಾಸದ ಇಷ್ಟಲಿಂಗ ಮಹಾಪೂಜಾ ಅಂಗವಾಗಿ ಜರುಗಿದ ಜನ ಜಾಗೃತಿ 2ನೇ ದಿನದ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.


ಮನುಷ್ಯ ಜೀವನದಲ್ಲಿ ಧರ್ಮ ಅರ್ಥ ಕಾಮ ಮೋಕ್ಷ ಎಂಬ ಚತುರ್ವಿಧ ಪುರುಷಾರ್ಥಗಳಲ್ಲಿ ಒಂದನ್ನಾದರೂ ಸಂಪಾದಿಸಿಕೊಳ್ಳದಿದ್ದರೆ ಜೀವನ ನಿರರ್ಥಕ. ಭೌತಿಕ ಸಂಪನ್ಮೂಲಗಳಾಗಲಿ ಸಿರಿ ಸಂಪತ್ತಿನ ಸಂಗ್ರಹಗಳಾಗಲಿ ಮನುಷ್ಯನಿಗೆ ಸಂತೃಪ್ತಿ ತಂದು ಕೊಡಲಾರವು. ಅದರೊಂದಿಗೆ ಒಂದಿಷ್ಟಾದರೂ ಆಧ್ಯಾತ್ಮಿಕ




ತಿಳುವಳಿಕೆ ಮುಖ್ಯ. ಯಾವ ಸಂಪತ್ತಿಗಾಗಿ ಈ ಜೀವ ಜಗತ್ತು ಬದುಕುತ್ತಿದೆಯೋ ಆ ಸಂಪತ್ತಿನ ಪ್ರಾಪ್ತಿಗಾಗಿ ಶ್ರಮಿಸಬೇಕಾಗುತ್ತದೆ. ಮಲಿನಗೊಂಡ ಮನಸ್ಸಿಗೆ ಶಿವಜ್ಞಾನದ ಅರಿವು ಮೂಡಿಸಿ ಜಾಗೃತಗೊಳಿಸುವ ಶಕ್ತಿ ಶ್ರೀ ಗುರುವಿಗೆ ಇದೆ. ಹೃದಯ ಹೃದ್ಭೂಮಿಯನ್ನು ಕೃಷಿಗೈದು ಸಂಸ್ಕಾರ ಸಚ್ಚಾರಿತ್ರ್ಯದಿಂದ ಬದುಕನ್ನು ಶ್ರೀಮಂತಗೊಳಿಸುವ ಅದ್ಭುತ ಶಕ್ತಿ ಗುರುವಿನಲ್ಲಿದೆ. ಶ್ರೀ ಜಗದ್ಗುರು ರೇಣುಕಾಚಾರ್ಯರು ಸಿದ್ಧಾಂತಶಿಖಾಮಣಿ ಗ್ರಂಥದಲ್ಲಿ ಗುರು ಹಿರಿಮೆಯನ್ನು ಕೊಂಡಾಡಿದ್ದಾರೆ ಎಂದರು.

ಸಾಹಿತ್ಯ ಸಂಶೋಧಕರಾದ ಡಾ॥ ಎ.ಎಸ್. ವಾಲಿ ಅವರು ಮಾತನಾಡಿ ಶಿವಜ್ಞಾನದ ಅಕ್ಷಯ ಸಿದ್ಧಿಯಾದ ಶ್ರೀ ಗುರುವನ್ನು ಎಷ್ಟು ಕೊಂಡಾಡಿದರೂ ಕಡಿಮೆ ಆಗಿದೆ. ಪರಶಿವನ ಸಾಕಾರ ರೂಪ ಗುರುವೆಂದು ವೀರಶೈವ ಧರ್ಮ ಹೇಳುತ್ತದೆ. ಶಿವ ಪಥವನರಿಯಲು ಗುರು ಪಥವೇ ಮೊದಲು ಎಂದು ಭಕ್ತಿ ಭಂಡಾರಿ ಬಸವಣ್ಣನವ್ರು ಹೇಳಿದ್ದುಂಟು. ನಂಬಿದವರ ಬಾಳಿನಲ್ಲಿ ಶ್ರೀ ಗುರು ಅದ್ಭುತ ಶಕ್ತಿ ತುಂಬಿ ಉಜ್ವಲ ಬಾಳಿಗೆ ಬಲವನ್ನು ದೊರಕಿಸಿಕೊಡುವಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯರಾಗಲಿ ಶ್ರೀ ಜಗದ್ಗುರು ರೇವಣಸಿದ್ದೇಶ್ವರರಾಗಲಿ ಧಾರ್ಮಿಕ ಕ್ರಾಂತಿಯ ಜೊತೆಗೆ ಸಾಮಾಜಿಕ ಸತ್ಕ್ರಾಂತಿಗೈದ ಕೀರ್ತಿ ಅವರಿಗೆ ಸಲ್ಲುತ್ತದೆ ಎಂದರು. ತಿಪಟೂರು ಷಡಕ್ಷರಿ ಮಠದ ರುದ್ರಮುನಿ ಸ್ವಾಮಿಗಳು ಮಾತನಾಡಿ ವ್ಯಕ್ತಿತ್ವ ವಿಕಾಸಕ್ಕೆ ಧರ್ಮ-ಆಧ್ಯಾತ್ಮಗಳ ಕೊಡುಗೆ ಅಪಾರ. ಭೌತಿಕ ಸಂಪತ್ತು ಶಾಶ್ವತವಲ್ಲ. ಆಧ್ಯಾತ್ಮದ ಸಂಪತ್ತೇ ನಿಜವಾದ ಸಂಪತ್ತು. ಶ್ರೀ ಜಗದ್ಗುರು ರೇಣುಕಾಚಾರ್ಯರ ಮತ್ತು ಬಸವಾದಿ ಶಿವಶರಣರ ವಿಚಾರ ಧಾರೆಗಳು ಬದುಕಿ ಬಾಳುವ ಜನಾಂಗಕ್ಕೆ ಆಶಾಕಿರಣವೆಂದರು. ಸಮಾರಂಭದ ನೇತೃತ್ವ ವಹಿಸಿದ ಸಿದ್ಧರಬೆಟ್ಟ ಕ್ಷೇತ್ರದ ವೀರಭದ್ರ ಶಿವಾಚಾರ್ಯ ಸ್ವಾಮಿಗಳು ಪ್ರಾಸ್ತಾವಿಕವಾಗಿ ಮಾತನಾಡಿ ಮಾನವೀಯ ಸಂಬಂಧಗಳು ಶಿಥಿಲಗೊಳ್ಳುತ್ತಿರುವ ಇಂದಿನ ಸಂದರ್ಭದಲ್ಲಿ ಇಂಥ ಧಾರ್ಮಿಕ ಸಮಾರಂಭಗಳು ಅವಶ್ಯಕ. ಶ್ರೀ ರಂಭಾಪುರಿ ಜಗದ್ಗುರುಗಳ ಧರ್ಮ ಜಾಗೃತಿ ಅಭಿಯಾನ ನಿರಂತರ ಜರುಗುತ್ತಿರುವುದು ಭಕ್ತರ ಸೌಭಾಗ್ಯವೆಂದರು. ಬಿಳಿಕಿ ರಾಚೋಟೇಶ್ವರ ಶ್ರೀಗಳು, ಬೀರೂರು ರುದ್ರಮುನಿ ಶ್ರೀಗಳು, ಮಾದಿಹಳ್ಳಿ ಚನ್ನಮಲ್ಲಿಕಾರ್ಜುನ ಶ್ರೀಗಳು ಉಪಸ್ಥಿತರಿದ್ದರು.

ಶಾಸಕ ಜಿ.ಬಿ.ಜೋತಿಗಣೇಶ, ಅಂಬಿಕಾ ಹುಲಿನಾಯ್ಕರ್, ಟಿ.ಸಿ.ಓಹಿಲೇಶ್ವರ, ಶಶಿ ಹುಲಿಕುಂಟೆಮಠ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದರು. ಎನ್.ಆರ್.ವಿಶ್ವಾರಾಧ್ಯ, ಸಿ.ಎಸ್.ಬಸವರಾಜಯ್ಯ, ಹೆಚ್.ಎನ್. ಚಂದ್ರಶೇಖರ, ಡಿ.ಜಗದೀಶ, ಕೆ.ಎಸ್. ದರ್ಶನ ಮೊದಲಾದ ಗಣ್ಯರಿಗೆ ಶ್ರೀ ರಂಭಾಪುರಿ ಜಗದ್ಗುರುಗಳು ಗುರುರಕ್ಷೆಯಿತ್ತು ಶುಭ ಹಾರೈಸಿದರು.



# ಕುಪ್ಪಳ್ಳಿ ವೆಂಕಟಪ್ಪ ಪುಟ್ಟಪ್ಪ

## ಅಕ್ಷರಗಳ ಸಂಶೋಧನೆ-ಬರವಣಿಗೆ-ಸಾಹಿತ್ಯ- ಕುವೆಂಪು- ಕನ್ನಡ ಭಾಷೆ..

ಕನ್ನಡ ಸಾಹಿತ್ಯ ಲೋಕದ ಸಾಮ್ರಾಟ ಕುವೆಂಪು ಅವರ ಜನ್ಮದಿನದ ಸಂದರ್ಭದಲ್ಲಿ ಬರವಣಿಗೆ - ಸಾಹಿತ್ಯ - ಕನ್ನಡ ಭಾಷೆ ಕುರಿತ ಒಂದಷ್ಟು ಮಾತುಕತೆ...... ( ಡಿಸೆಂಬರ್ 29 )

ಕುಪ್ಪಳ್ಳಿ ವೆಂಕಟಪ್ಪ ಪುಟ್ಟಪ್ಪ ಎಂಬ ಮಲೆನಾಡಿನ ವ್ಯಕ್ತಿಯೊಬ್ಬರು ಸಾವಿರಾರು ವರ್ಷಗಳ ಇತಿಹಾಸವಿರುವ ಕನ್ನಡ ಎಂಬ ಭಾಷೆಯನ್ನು - ಸಂಸ್ಕೃತಿಯನ್ನು - ಕನ್ನಡ ಮಣ್ಣಿನ ಸಾಂಸ್ಕೃತಿಕ ಪ್ರಜ್ಞೆಯನ್ನು ಮುಗಿಲೆತ್ತರಕ್ಕೆ ಏರಿಸಿ ಅದರ ಗಡಿಯನ್ನು ವಿಸ್ತರಿಸಿ ಭಾಷೆಯ ಮಹತ್ವ ಸಾರಿದವರು. ಅಕ್ಷರಗಳಲ್ಲಿ ಕೇವಲ ಭಾವನೆಗಳನ್ನು ಮಾತ್ರ ತುಂಬದೆ ಒಂದು ನಾಡಿನ ಮನುಷ್ಯ ಪ್ರಜ್ಞೆಯನ್ನು ಚಿಂತನೆಯಾಗಿಸಿ ವಿಶ್ವ ಮಾನವತೆಗೆ ದಾರಿ ತೋರಿದ ಅದ್ಭುತ ಚಿಂತಕ.

ಅವರ ನೆನಪಿನ ನೆಪದಲ್ಲಿ ಒಂದಷ್ಟು ಅಕ್ಷರಗಳ ಆತ್ಮಾವಲೋಕನ......

ಬರವಣಿಗೆ.....

ಅಕ್ಷರಗಳ ಸಂಶೋಧನೆಯೊಂದಿಗೆ ಉಗಮವಾದ ಅದ್ಭುತ ಸೃಷ್ಟಿ ಈ ಬರವಣಿಗೆ. ಅಕ್ಷರಗಳಿಗಿಂತ ಮೊದಲು ಸಹ ಬರವಣಿಗೆ ಅಸ್ತಿತ್ವದಲ್ಲಿತ್ತು. ಆದರೆ ಚಿತ್ರ, ಸಂಜ್ಞೆ ಮುಂತಾದ ವಿಚಿತ್ರ ವೈಶಿಷ್ಟ್ಯ ರೂಪದಲ್ಲಿ ಅದು ಬಳಕೆಯಲ್ಲಿತ್ತು.

ಬರವಣಿಗೆ ಅದೊಂದು ಬರೆಯುವ ಕ್ರಿಯೆ ಅಥವಾ ಅಭಿಪ್ರಾಯ ವ್ಯಕ್ತಪಡಿಸುವ ಮಾರ್ಗ ಅಥವಾ ಭಾವನೆಗಳ ದಾಖಲೀಕರಣ ಅಥವಾ ಅಕ್ಷರಗಳ ಜೋಡಣಾ ಸ್ವಾತಂತ್ರ್ಯ ಅಥವಾ ಭಾಷೆಯ ಕ್ರಮಬದ್ಧ ಉಪಯೋಗ ಅಥವಾ ಸಂಪರ್ಕ ಮಾಧ್ಯಮ ಅಥವಾ

ಮನುಷ್ಯನ ಒಂದು ಕಲಾ ಪ್ರಕಾರ ಹೀಗೆ ನಾನಾ ರೀತಿಯ ಉತ್ತರಗಳನ್ನು ಹುಡುಕಿ ಹೇಳಬಹುದು.

ಯಾವಾಗ ಬರಹ ಒಂದು ಕ್ರಮಬದ್ಧತೆಯನ್ನು ಪಡೆಯಿತೋ ನಂತರದಲ್ಲಿ ವಿವಿಧ ಭಾಷೆಗಳು ಬೆಳವಣಿಗೆ ಹೊಂದಿದವು. ಅಕ್ಷರ ಸಂಶೋಧನೆಗು ಮೊದಲು ಭಾಷೆಗಳು ಅಸ್ತಿತ್ವದಲ್ಲಿದ್ದವು. ಆದರೆ ಲಿಪಿ ಇರಲಿಲ್ಲ. ಲಿಪಿಯ ಉಗಮದ ನಂತರ ಭಾಷೆಗಳು ಮಹತ್ವ ಪಡೆದುಕೊಂಡವು.

ಲ್ಯಾಟಿನ್, ಪ್ರಾಕೃತ, ಪಾಲಿ, ಪಾರ್ಸಿ, ಸ್ಪಾನಿಷ್, ಚೀನೀ, ಅರಬ್ಬೀ, ಪರ್ಷಿಯನ್, ಹಿಬ್ರೂ, ಸಂಸ್ಕೃತ ಭಾಷೆಗಳು ಅತ್ಯಂತ ಪ್ರಾಚೀನ ಎಂದು ಹೇಳಲಾಗುತ್ತದೆ. ನನಗೆ ಈ ವಿಷಯದಲ್ಲಿ ತುಂಬಾ ಸ್ಪಷ್ಟವಾಗಿ ಮತ್ತು ಆಳವಾಗಿ ತಿಳಿದಿಲ್ಲ. ಸಾಮಾನ್ಯ ಜ್ಞಾನ ಮಾತ್ರ ಇದೆ. ಖಚಿತವಾಗಿ ತಿಳಿದ ಭಾಷಾ ತಜ್ಞರು ಇನ್ನಷ್ಟು ಮಾಹಿತಿ ಹಂಚಿಕೊಳ್ಳಬಹುದು.

ಇತಿಹಾಸ ಏನೇ ಇರಲಿ ಬರವಣಿಗೆ ಎಂಬುದು ಮಾನವ ನಾಗರಿಕತೆಯ ಎಲ್ಲವನ್ನೂ ಅಡಗಿಸಿಕೊಂಡು ಅದನ್ನು ಇಲ್ಲಿಯವರೆಗೂ ಮುನ್ನಡೆಸಿಕೊಂಡು ಬಂದ ಅತ್ಯುತ್ತಮ ವಾಹಕ.

ಬರಹಗಳ ಮೂಲಗಳು, ರೀತಿಗಳು, ಉಪಕರಣಗಳು, ಪ್ರಕಾರಗಳು, ರೂಪಗಳು, ಉದ್ದೇಶಗಳು, ಲಿಪಿಗಳು, ಭಾಷೆಗಳು ಎಷ್ಟೇ ಇರಬಹುದು ಆದರೆ ಬರಹ ನಮ್ಮ ಬದುಕಿನ ಅವಿಭಾಜ್ಯ ಅಂಗವಾಗಿದೆ. ಬರಹವಿಲ್ಲದೆಯೂ ಮನುಷ್ಯ ಬದುಕಬಹುದು ಮತ್ತು ಈಗಲೂ ಬಹಳಷ್ಟು ಜನ ಬದುಕುತ್ತಿದ್ದಾರೆ ಅದು ಅನಿವಾರ್ಯವಲ್ಲ. ಆದರೆ ಬರಹವಿಲ್ಲದಿದ್ದರೆ ಮನುಷ್ಯ ಕಳೆದುಕೊಳ್ಳುತ್ತಿದ್ದುದು ಏನು ಎಂದು ಯೋಚಿಸಿದಾಗ ಬರಹದ ಮಹತ್ವ ಅರ್ಥವಾಗುತ್ತದೆ.

ಬರಹವನ್ನು ಆಕಾಶದ ಅನಂತತೆಗೆ ಹೋಲಿಸಬಹುದು. ಅಕ್ಷರಗಳೇ ಬರಹದ ಮೂಲವಾದರು ಇಂದು ಅದೇ ಅಕ್ಷರಗಳಲ್ಲಿ ಬರಹದ ಸರಿಯಾದ ಮತ್ತು ಸ್ಪಷ್ಟವಾದ ಅರ್ಥವನ್ನು ಹಿಡಿದಿಡುವುದು ಸಾಧ್ಯವಿಲ್ಲ. ಅದು ಅಕ್ಷರವನ್ನು ಮೀರಿ ಬೆಳೆದಿದೆ. ಮನುಷ್ಯನ ಭಾವನೆ ಮತ್ತು ಬುದ್ದಿಶಕ್ತಿ ಬೆಳವಣಿಯಲ್ಲಿ ಅಕ್ಷರ ಮತ್ತು ಭಾಷೆ ಕೇವಲ ಮೆಟ್ಟಿಲಿನಂತೆ ಕೆಲಸ ಮಾಡುತ್ತಿದೆ. ಆತನ ಮನಸ್ಸೇ ಆತನ ತಲೆಯ ಮೇಲೆ ಕಿರೀಟದಂತೆ ಬಂದು ಕುಳಿತಿದೆ.

ಎಲ್ಲಾ ಪರಿವರ್ತನೆಗಳ ಬಳಿಕ ಬರವಣಿಗೆ " ಸಾಹಿತ್ಯ " ಎಂಬ ಪ್ರಕಾರದಲ್ಲಿ ಹೆಚ್ಚು ಪ್ರಕಾಶಮಾನವಾಗಿ, ಜನಪ್ರಿಯವಾಗಿ ರಾರಾಜಿಸುತ್ತಿದೆ.

" ಖಡ್ಗಕ್ಕಿಂತ ಲೇಖನ ಹರಿತ " ಎಂಬುದು ಹಳೆಯ ಮಾತು. ಈಗ ಬರಹಗಳು ಬಾಂಬು ಬಂದೂಕುಗಳಿಗಿಂತ ಪ್ರಬಲವಾಗಿ ಕೆಲಸ ಮಾಡುತ್ತಿದೆ. ಕ್ರಾಂತಿಯ ಮೂಲದ್ರವ್ಯವಾಗಿಯೂ ಉಪಯೋಗಿಸಲಾಗುತ್ತಿದೆ.

ಬರಹ ನಮ್ಮನ್ನು ನಗಿಸುತ್ತದೆ, ಅಳಿಸುತ್ತದೆ, ಕೋಪವೂ ಸೇರಿ ನವ ರಸಗಳನ್ನು ಉತ್ಪತ್ತಿಮಾಡುತ್ತದೆ. ಹಾಗೆಯೇ ಬರಹ ಮೋಸ ವಂಚನೆ ದ್ರೋಹಗಳನ್ನು ಎಸಗುತ್ತದೆ.

ಕೆಲವು ಉತ್ಕೃಷ್ಟಬರಹಗಳು, ಕೆಲವು ಸಾಧಾರಣ ಬರಹಗಳು ಮತ್ತೆ ಕೆಲವನ್ನು ಕಳಪೆ ಬರಹಗಳು ಎಂಬುದಾಗಿಯೂ ವಿಂಗಡಿಸಲಾಗುತ್ತದೆ. ಇಲ್ಲಿ ಬರವಣಿಗೆಯ ಸಾಮರ್ಥ್ಯ ಮತ್ತು ಓದುಗರ ಸಾಮರ್ಥ್ಯ ಎರಡೂ ಪರೀಕ್ಷೆ ಒಳಪಡುತ್ತದೆ.

ಒಬ್ಬ ವ್ಯಕ್ತಿ ಬರಹಗಾರನಾಗಲು ಅರ್ಹತೆ ಮತ್ತು ಮಾನದಂಡಗಳೇನು ಎಂಬುದು ನಿರ್ದಿಷ್ಟವಾಗಿ ಇಲ್ಲ. ಆಸಕ್ತಿಯೇ ಮುಖ್ಯ. ಆ ಆಸಕ್ತಿ ಆತನ ಬರಹ ಶಕ್ತಿಯ ಮುಖಾಂತರ ಅರ್ಹತೆಯಾಗಿ ಪರಿವರ್ತನೆ ಹೊಂದುತ್ತದೆ.

ಆದರೆ ಬರಹ ಇಷ್ಟೊಂದು ಸರಳವಾಗಿಲ್ಲ. ಕೋಟಿ ಕೋಟಿ ಬರಹಗಾರರಿದ್ದಾರೆ. ವಿಶ್ವಮಟ್ಟದಲ್ಲಿ ಸಾಹಿತ್ಯಕ್ಕಾಗಿ ನೊಬೆಲ್ ಮತ್ತು ಭಾರತದಲ್ಲಿ ಜ್ಞಾನಪೀಠ ಎಂಬ ಅತ್ಯುನ್ನತ ಪ್ರಶಸ್ತಿಗಳನ್ನು ಸ್ಥಾಪಿಸಲಾಗಿದೆ. ಅಲ್ಲದೆ ಇನ್ನೂ ಹಲವಾರು ಪ್ರಶಸ್ತಿ ಬಿರುದುಗಳು ಇವೆ.

ಬರವಣಿಗೆ ಹವ್ಯಾಸವು ಹೌದು, ವೃತ್ತಿಯೂ ಹೌದು, ಸಾಧನೆಯಾಗಿಯೂ ಗುರುತಿಸಲಾಗುತ್ತದೆ. ಬರಹಗಳಿಂದಲೇ ಬದುಕನ್ನು ಕಟ್ಟಿಕೊಂಡವರು ಇದ್ದಾರೆ, ಬರಹದಿಂದ ಹಣ ಅಧಿಕಾರ ಜನಪ್ರಿಯತೆ ಪಡೆದವರು ಇದ್ದಾರೆ, ಬರಹವನ್ನೇ ನಂಬಿ ಅನೇಕ ಕಷ್ಟ ನಷ್ಟಗಳಿಗೆ ಒಳಗಾದವರು ಸಹ ಸಾಕಷ್ಟು ಇದ್ದಾರೆ.ಓದು ಬರಹಗಳು ಮನುಷ್ಯರನ್ನು ಹೆಚ್ಚು ನಾಗರಿಕವಾಗಿ ಮತ್ತು ಮಾನವೀಯವಾಗಿ ವರ್ತಿಸುವಂತೆ ಪ್ರೇರೇಪಿಸುತ್ತದೆ ಎಂಬ ಅಭಿಪ್ರಾಯವಿತ್ತು. ಆದರೆ ಅದು ಇತ್ತೀಚಿನ ಆಧುನಿಕ ಸಂದರ್ಭದಲ್ಲಿ ಅಷ್ಟೇನು ನಿಜವಲ್ಲ, ಬದಲಾಗಿ ಅವು ಆತನ ವ್ಯಕ್ತಿತ್ವವನ್ನು ಸಂಕುಚಿತ ಗೊಳಿಸುತ್ತಿದೆ ಎಂಬ ಆರೋಪಗಳು ಬಲವಾಗಿ ಕೇಳಿ ಬರುತ್ತಿದೆ. ಓದು ಬರಹಗಳೇ ಬೇರೆ, ವಾಸ್ತವ ಬದುಕೇ ಬೇರೆ ಎಂದು ಕೆಲವರು ಹಾಸ್ಯ ಮಾಡುತ್ತಾರೆ.

ಮೊದಲಿಗೆ ಬರವಣಿಗೆ ಎಂಬುದು ಕೆಲವೇ ಕೆಲವು ಜನರ ಸ್ವತ್ತಾಗಿತ್ತು. ಮಾಧ್ಯಮಗಳ ಉಗಮದೊಂದಿಗೆ ಇನ್ನೂ ಹೆಚ್ಚು ಜನ ಬರಹಗಾರರಿಗೆ ವೇದಿಕೆ ದೊರೆಯಿತು. ಆದರೆ ಸಾಮಾಜಿಕ ಜಾಲತಾಣಗಳ ಅಭಿವೃದ್ಧಿಯೊಂದಿಗೆ ಬರವಣಿಗೆ ಸಾಮಾನ್ಯ ಜನರಿಗೂ ಬಾಗಿಲು ತೆರೆಯಿತು.ಈಗ ಅಕ್ಷರ ಬಲ್ಲ, ಮೊಬೈಲ್ ಕಂಪ್ಯೂಟರ್ ಲ್ಯಾಪ್ ಟಾಪ್ ಮುಂತಾದ ವಸ್ತುಗಳನ್ನು ಹೊಂದಿರುವ ಎಲ್ಲರೂ ಏನಾದರೂ ಬರೆಯಲು ಪ್ರಾರಂಭಿಸಿದ್ದಾರೆ ಅಥವಾ ಕನಿಷ್ಠ ಕೆಲವು ವಿಷಯಗಳ ಬಗ್ಗೆ ತಮ್ಮ ಅಭಿಪ್ರಾಯವನ್ನಾದರು ವ್ಯಕ್ತಪಡಿಸುತ್ತಾರೆ. ಇದೊಂದು ಕ್ರಾಂತಿಕಾರಕ ಬದಲಾವಣೆ.


ಆದರೆ ಬರೆಯುವ ರೀತಿ, ವಿಷಯಗಳು, ಉದ್ದೇಶಗಳು ಅನೇಕ ಒಳ್ಳೆಯ ಮೌಲ್ಯಗಳನ್ನು ವಿನಾಶದಅಂಚಿಗೆತಂದುನಿಲ್ಲಿಸುತ್ತಿದೆ.ಬರವಣಿಗೆ ವ್ಯಾಪಾರವಾಗಿದೆ, ಅಷ್ಟೇ ಅಲ್ಲ ಬರವಣಿಗೆ ವಿಷಯುಕ್ತ ಕತ್ತಿಯಾಗಿದೆ. ಬರಹಗಾರ ವಿಷ ಉಗುಳುವ ಹಾವಿನಂತಾಗಿದ್ದಾನೆ. ಬರಹಗಳು ನಿಯಂತ್ರಣ ಕಳೆದುಕೊಳ್ಳುತ್ತಿವೆ. ಸಮಾಜದ ಸ್ವಾಸ್ಥ್ಯ ಕೆಡಿಸುತ್ತಿದೆ.

ಸಾಹಿತ್ಯವಾಗಿ ಬರಹ ಒಂದು ಅತ್ಯದ್ಭುತ ಪ್ರಯೋಗ. ಅದೇ ಪ್ರಯೋಗ ಮಾನವ ಜನಾಂಗದ ವಿನಾಶಕ್ಕೂ ಕಾರಣವಾಗುತ್ತಿದೆ. ಅದರ ಬಗ್ಗೆ ಎಚ್ಚರಿಕೆ ಅಗತ್ಯ ಎಂದು ಬರಹದ ಮುಖಾಂತರವೇ ಮನವಿ ಮಾಡಿಕೊಳ್ಳಬೇಕಾಗಿದೆ. ಬರವಣಿಗೆ ಮತ್ತು ಬರಹಗಾರ,ಬದುಕು ಮತ್ತು ಸಮಾಜದ ಶುದ್ಧ ಚಾರಿತ್ರ್ಯ ಮತ್ತು ವ್ಯಕ್ತಿತ್ವದ ಪ್ರತಿಬಿಂಬವಾಗುವ ಭವಿಷ್ಯದ ಕನಸು ಕಾಣುತ್ತಾ......

ಬರವಣಿಗೆ ಸಾಹಿತ್ಯವಾಗಿ ಬೆಳವಣಿಗೆ ಹೊಂದುವ ಪ್ರಕ್ರಿಯೆ ಕುರಿತು ನಾಳೆ ಮುಂದುವರಿಸಲಾಗುವುದು......ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ.ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ,

ಮನಗಳಲ್ಲಿ - ಮನೆಗಳಲ್ಲಿ - ಮತಗಳಲ್ಲಿ - ಪರಿವರ್ತನೆಗಾಗಿ,

ಮನಸ್ಸುಗಳ ಅಂತರಂಗದ ಚಳವಳಿ.



» ಲೇಖನ
ವಿವೇಕಾನಂದ. ಹೆಚ್.ಕೆ.
9844013068

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T